ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ...

RNI No: KARKAN/2014/54928

ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI

Postal Registration N.o KA/BGW--1862/2024-26

KANNADA DAILY PAPER

ಕನ್ನಡ ದಿನಪತ್ರಿಕೆ

ಸಂಪುಟ: 11
Vol:11
ಸಂಚಿಕೆ: 135
Issuse:135
ದಿನಾಂಕ:01-07-2024
Date:01-07-2024
ಸೋಮವಾರ Monday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ನೂತನ 3 ಕ್ರಿಮಿನಲ್ ಕಾಯ್ದೆ ಜಾರಿ

## ಡಿಜಟಲ್ ಸಾಕ್ಷಿ ಪರಿಗಣನೆ, ತನಿಖೆಗೆ ಕಾಲಮಿತಿ ತ್ವರಿತ ನ್ಯಾಯದಾನ ಉದ್ದೇಶ

ನವದೆಹಲಿ:-

ಡಿಜಿಟಲ್ ಸಾಕ್ಷ್ಯಗಳನ್ನು ಪುರಾವೆಯಾಗಿ ಪರಿಗಣಿಸುವ ಶಿಕ್ಷೆಯ ರೂಪವಾಗಿ ಸಮುದಾಯ ಸೇವೆಯನ್ನು ವಿಧಿಸುವ ಲೈಂಗಿಕ ಅಪರಾಧಗಳಿಗೆ ಕಠಿಣ ಶಿಕ್ಷೆ ವಿಧಿಸಲು ಅವಕಾಶ ನೀಡುವ, ಕಾಲಮಿತಿಯಲ್ಲಿ ತನಿಖೆ ಹಾಗೂ ತ್ವರಿತ ನ್ಯಾಯ ಖಾತ್ರಿಪಡಿಸುವ ನಿಟ್ಟಿನಲ್ಲಿ ಮೂರು ಹೊಸ ಕ್ರಿಮಿನಲ್ ಕಾನೂನುಗಳು ದೇಶಾದ್ಯಂತ ಇಂದಿನಿಂದ ಜಾರಿಗೆಯಾಗಲಿವೆ.

ಸಮಾಜದ ಮತ್ತು ಭವಿಷ್ಯದಲ್ಲಿನಾಗರಿಕರ ಹಿತದೃಷ್ಠಿಯಿಂದ ಬ್ರಿಟೀಷರ ಕಾಲದ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (ಕ್ರಿಮಿನಲ್ ಪ್ರೊಸಿಸರ್ ಕೋಡ್), ಭಾರತೀಯ ದಂಡ ಸಂಹಿತೆ (ಇಂಡಿಯನ್ ಪಿನಲ್ ಕೋಡ್) ಮತ್ತು ಭಾರತೀಯ ಸಾಕ್ಷ ಅಧಿನಿಯಮ(ಇಂಡಿಯನ್ ಎವಿಡೆನ್ಸ್ ಆಕ್ಟ್)ನ್ನು ಬದಲಿಸಿ ಭಾರತೀಯ ನ್ಯಾಯ ಸಂಹಿತ, ಭಾರತೀಯ ಸುರಕ್ಷಾ ಮತ್ತು ಭಾರತೀಯ ಸಾಕ್ಷಿ ಅಧಿನಿಯಮ ಎಂಬ ಕ್ರಿಮಿನಲ್ ಕಾಯ್ದೆಗಳನ್ನು ರೂಪಿಸಲಾಗಿದ್ದು, ಈ ಕಾಯ್ದೆಗಳು ಇಂದಿನಿಂದ ಜಾರಿಯಾಗಲಿವೆ. ಈ ಹೊಸ ಕ್ರಿಮಿನಲ್ ಕಾಯ್ದೆಯಲ್ಲಿ ಡಿಜಿಟಲ್ ದಾಖಲೆಗಳನ್ನು ಪುರಾವೆಗಳನ್ನಾಗಿ ಪರಿಗಣಿಸುವ ಪ್ರಮುಖ ಬದಲಾವಣೆಯು ಇದ್ದು, ಭಾರತೀಯ ನ್ಯಾಯ ಸಂಹಿತ ದಂಡ ಕಾನೂನು ಬದಲಾವಣೆ ಮಾಡಿ ಸೆಕ್ಷನ್ 4ರ ಅಡಿಯಲ್ಲಿ



ಶಿಕ್ಷೆಯ ರೂಪವಾಗಿ ಸಮುದಾಯ ಸೇವೆಯನ್ನು ವಿಧಿಸುವ ಅಂಶವೂ ಇದೆ.

ಲೈಂಗಿಕ ಅಪರಾಧಗಳಿಗೆ ಕಠಿಣ ಶಿಕ್ಷೆ ವಿಧಿಸುವ ಅಂಶ ಹೊಸ ಕಾಯ್ದೆಗಳಲ್ಲಿ ಇದ್ದು, ಮದುವೆಗೆ ಭರವಸೆ ನೀಡುವ ಮೂಲಕ ಮೋಸದ ಲೈಂಗಿಕ ದೌರ್ಜನ್ಯದಲ್ಲಿ ತೊಡಗುವವರಿಗೆ 10 ವರ್ಷಗಳ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸುತ್ತದೆ. ಉದ್ಯೋಗ, ಬಡ್ತಿ ಅಥವಾ ಮದುವೆಗೆ ಸಂಬಂಧಿಸಿದ ಸುಳ್ಳು ಭರವಸೆಗಳನ್ನು ಮೋಸ ಎಂದು ಪರಿಗಣಿಸಿ ಶಿಕ್ಷೆ ವಿಧಿಸುವ ಅಂಶವೂ ಈ ಕಾನೂನಿನಲ್ಲಿ ಇದೆ.

ವಿವಿಧ ಕಾನೂನು ಪ್ರಕಿಯೆಗಳಿಗೆನಿರ್ಧಿಷ್ಟ ಸಮಯವಕಾಶವನ್ನು ಈ ಕಾಯ್ದೆ ಕಡ್ಡಾಯಗೊಳಿಸುವುದು ಪ್ರಮುಖ ಅಂಶವಾಗಿದೆ. ಕಾನೂನು ಬಾಹಿರ ಚಟುವಟಿಕೆಗಳ ವಿಶಾಲ ವ್ಯಾಪ್ತಿಯನ್ನು ಈ ಹೊಸ ಕಾನೂನುಗಳು ಒಳಗೊಂಡಿದೆ. ಈ ಚಟುವಟಿಕೆಗಳಲ್ಲಿ ಅಪಹರಣ, ದರೋಡೆ, ವಾಹನ ಕಳ್ಳತನ, ಸುಲಿಗೆ, ಭೂಕಬಳಿಕೆ, ಗುತ್ತಿಗೆ ಹತ್ಯೆ, ಆರ್ಥಿಕ ಅಪರಾಧಗಳು, ಸೈಬರ್ ಅಪರಾಧಗಳು ಮತ್ತು ಮಾನವ ಕಳ್ಳ ಸಾಗಣೆ, ಔಷಧಗಳು, ಶಸ್ತ್ರಾಸ್ತ್ರಗಳು ಹಾಗೂ ಅಕ್ರಮ ಸರಕು ಸೇವೆಗಳು ಸೇರಿವೆ.

ವೇಶ್ಯಾವಾಟಿಕೆ ಅಥವಾ ಸುಲಿಗೆಗಾಗಿ ಮಾನವ ಕಳ್ಳ ಸಾಗಣೆ ನಿರ್ವಹಿಸುವ ವ್ಯಕ್ತಗಳು ಅಥವಾ ಗುಂಪುಗಳಿಗೆ ತೀವ್ರ ಶಿಕ್ಷೆ ವಿಧಿಸುವ ಕಾನೂನನ್ನು ಈ ಹೊಸ ಕಾನೂನುಗಳು ಒಳಗೊಂಡಿದ್ದು, ಬೆದರಿಕೆ, ದಬ್ಬಾಳಿಕೆ, ನೇರ ಅಥವಾ ಪರೋಕ್ಷ ಲಾಭಕ್ಕಾಗಿ ಕಾನೂನು ಬಾಹಿರ ವಿಧಾನಗಳ ಮೂಲಕ ಕಾರ್ಯಗತಗೊಳಿಸಲಾದ ಅಪರಾಧಗಳಿಗೆ ಕಠಿಣ ಶಿಕ್ಷೆ ನೀಡಲಾಗುತ್ತದೆ.

ರಾಷ್ಟ್ರೀಯ ಭದ್ರತೆಯೊಡ್ಡುವ ಕೃತ್ಯಗಳಿಗೆ ಜನರಲ್ಲಿ ಭಯೋತ್ಪಾದನೆಯನ್ನು ಒಡೆಂಮುವ ಉದ್ದೇಶದಿಂದ ಭಾರತದ ಏಕತೆ, ಸಮಗ್ರತೆ, ಸಾರ್ವಭೌಮತ್ವ ಅಥವಾ ಭದ್ರತೆಗೆ ಬೆದರಿಕೆ ಹಾಗೂ ಯಾವುದೇ ಚಟುವಟಿಕೆ ಭಯೋತ್ಪಾದನಾ ಕೃತ್ಯ ಎಂದು ಈ ಹೊಸ ಕಾನೂನಿನಲ್ಲಿ ವ್ಯಾಖ್ಯಾನಿಸಲಾಗಿದೆ. ಗುಂಪು ಹತ್ಯೆಗೂ ಮರಣ ದಂಡನೆ ಅಥವಾ ಜೀವವಾಧಿ ಶಿಕ್ಷೆ ವಿಧಿಸುವ ಅಂಶವೂ ಹೊಸ ಕಾನೂನುಗಳಲ್ಲಿದ್ದು, 5 ಅಥವಾ ಅದಕ್ಕಿಂತ ಹೆಚ್ಚು ವ್ಯಕ್ತಿಗಳ ಗುಂಪು ನಿರ್ವಹಿಸುವ ಅಪರಾಧಗಳಿಗೆ ಈ ಶಿಕ್ಷೆ ವಿಧಿಸುವ ಜತೆಗೆ ದಂಡವನ್ನು ಗುಂಪಿನ ಪ್ರತಿಯೊಬ್ಬ ಸದಸ್ಯರಿಗೂ ವಿಧಿಸಲು ಈ ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

1973ರ ಕ್ರಿಮಿನಲ್ ಪ್ರೊಸ್ಯೂಸರ್ ಕೋಡನ್ನು ಬದಲಿಸಿ ಭಾರತೀಯ ನಾಗರಿಕ ಸಂಹಿತಾ ಕಾನೂನನ್ನು ಜಾರಿ ಮಾಡಲಾಗುತ್ತಿದ್ದು, ವಿಚಾರಣಾ ಕೈದಿಗಳಿಗೆ ಜೀವಾವಧಿ ಶಿಕ್ಷೆ ಅಥವಾ ಬಹು ಆರೋಪಗಳನ್ನು ಹೊಂದಿರುವ ಪ್ರಕರಣಗಳನ್ನು ಹೊರತುಪಡಿಸಿ ಮೊದಲ ಬಾರಿಗೆ ಅಪರಾಧಿಗಳು ತಮ್ಮ ಗರಿಷ್ಠ ಶಿಕ್ಷೆಯ ಮೂರನೇ ಒಂದು ಭಾಗವನ್ನು ಪೂರೈಸಿದ ನಂತರ ಜಾಮೀನು ಪಡೆಯಲು ಅವಕಾಶ ಮಾಡಿಕೊಡುತ್ತದೆ. ಫ್ಲೋರೆನ್ಸಿಕ್ ತನಿಖೆಯು ಕನಿಷ್ಠ 7 ವರ್ಷ ಜೈಲು ಶಿಕ್ಷೆಗೆ ಗುರಿಯಾಗುವ ಅಪರಾಧಿಗಳಿಗೆ ಕಡ್ಡಾಯವಾಗಿದೆ.

ಅತ್ಯಾಚಾರ ಪ್ರಕರಣಗಳಲ್ಲಿ ತ್ವರಿತ ತನಿಖೆ ಮತ್ತು ನ್ಯಾಯ ಸಿಗಲು ಈ ಕಾಯ್ದೆ ಅವಕಾಶ ಮಾಡಿಕೊಟ್ಟಿದ್ದು, ಅತ್ಯಾಚಾರ ಸಂತ್ರಸ್ತರನ್ನು ಪರೀಕ್ಷಿಸುವ ವೈದ್ಯರು 7 ದಿನದೊಳಗೆ ತನಿಖಾಧಿಕಾರಿಗೆ ವರದಿ ಸಲ್ಲಿಸಬೇಕು. ವಾದಗಳನ್ನು ಪೂರ್ಣಗೊಳಿಸಿದ 30 ದಿನಗಳಲ್ಲಿ ತೀರ್ಪು ನೀಡಬೇಕು. 90 ದಿನಗಳಲ್ಲಿ ತನಿಖೆಯ ಪ್ರಗತಿಯನ್ನು ಸಂತ್ರಸ್ತರಿಗೆ ತಿಳಿಸಬೇಕು.

ಸೆಷನ್ಸ್ ನ್ಯಾಯಾಲಯಗಳು ಅಂತಹ ಆರೋಪಗಳ ಮೊದಲ ವಿಚಾರಣೆಯಿಂದ 60 ದಿನಗಳಲ್ಲಿ ಆರೋಪಗಳನ್ನು ರೂಪಿಸಬೇಕಾಗುತ್ತದೆ.

ಕ್ರಿಮಿನಲ್ ಪ್ರೊಸಿಸರ್ ಕೋಡ್ ಭಾರತದಲ್ಲಿ ಕ್ರಿಮಿನಲ್ ವಿಷಯಗಳನ್ನು ನಿರ್ಣಯಿಸಲು ನ್ಯಾಯಾಲಯಗಳ ಶ್ರೇಣಿ ಯನ್ನು ಸ್ಥಾಪಿಸುತ್ತದೆ.

ಇವುಗಳ ಸಹಿತ ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳು, ಅಧೀನ ನ್ಯಾಯಾಲಯಗಳು ಹೆಚ್ಚಿನ ಅಪರಾಧ ಪ್ರಕರಣಗಳ ವಿಚಾರಣೆಯನ್ನು ನಿರ್ವಹಿಸುತ್ತವೆ. ಉಚ್ಚ ನ್ಯಾಯಾಲಯಗಳು ಕ್ರಿಮಿನಲ್ ಮೊಕದ್ದಮೆಗಳು, ವಿಚಾರಣೆ ಮಾಡಲು ಹಾಗೂ ನಿರ್ಧರಿಸಲು ಅಂತ ಗರ್ತ ನ್ಯಾಯ ವ್ಯಾಪ್ತಿಯನ್ನು ಹೊಂದಿವೆ.

ಸುಪ್ರೀಂ ಕೋರ್ಟ್ ಉಚ್ಚ ನ್ಯಾಯಾಲಯಗಳಿಂದ ಮೇಲ್ಮನವಿಯನ್ನು ಆಲಿಸುತ್ತವೆ ಮತ್ತು ಕೆಲ ವಿಷಯಗಳಲ್ಲಿ ತನ್ನ ಮೂಲ ಅಧಿಕಾರ ವ್ಯಾಪ್ತಿಯನ್ನು ಸಹ ಚಲಾಯಿಸುತ್ತದೆ.

ಇಂದಿನಿಂದ ಭಾರತೀಯ ನ್ಯಾಯ ಸಂಹಿತೆ, ಭಾರತೀಯ ಸುರಕ್ಷಾ ಸಂಹಿತಾ ಹಾಗೂ ಭಾರತೀಯ ಸಾಕ್ಷ್ಯ ಕಾಯ್ದೆಯು ಜಾರಿಯಾಗಲಿವೆ.

ಬ್ರಿಟೀಷರ ಕಾಲದ ಅಪರಾಧ ಕಾಯ್ದೆಗಳ ಬದಲು ಈ ಮೂರು ಹೊಸ ಕಾಯ್ದೆಗಳನ್ನು ಜಾರಿಗೆ ತರಲಾಗಿದ್ದು, ತ್ವರಿತ ನ್ಯಾಯ ಒದಗಿಸುವ ಉದ್ದೇಶ ಈ ಕಾನೂನು ಜಾರಿಯಲ್ಲಿದೆ.

ಈ ಮೂರು ಕ್ರಿಮಿನಲ್ ಕಾಯ್ದೆಗಳನ್ನು ಕಳೆದ ವರ್ಷ ಆಗಸ್ಟ್‌ನಲ್ಲೇ ಸಂಸತ್ ಅಂಗೀಕರಿಸಿತ್ತು. ಅದೇ ತಿಂಗಳು ರಾಷ್ಟ್ರಪತಿಗಳ ಒಪ್ಪಿಗೆಯನ್ನು ಸಹ ಪಡೆಯಲಾಗಿತ್ತು.

ಕಳೆದ ಫೆಬ್ರವರಿಯಲ್ಲಿ ಕೇಂದ್ರ ಸರ್ಕಾರ ಜುಲೈ 1 ರಿಂದ ಈ ಕಾನೂ ನುಗಳು ಜಾರಿಯಾಗುತ್ತವೆ ಎಂಬ ಅಧಿಸೂಚನೆಯನ್ನು ಹೊರಡಿಸಿತ್ತು.

## ಸಹಪಾಠಿಗಳು, ಸೇನೆ, ನೌಕಾಪಡೆ ಮುಖ್ಯಸ್ಥರು

ನವದೆಹಲಿ:-

ಮಧ್ಯಪ್ರದೇಶದ ಸೈನಿಕ ಶಾಲೆ ರೇವಾದಲ್ಲಿ ವ್ಯಾಸಂಗ ಮಾಡಿದ ಇಬ್ಬರು ಸಹಪಾಠಿಗಳು ಭಾರತೀಯ ಸೇನೆ ಮತ್ತು ನೌಕಾಪಡೆಯ ಮುಖ್ಯಸ್ಥರಾಗುವ ಇತಿಹಾಸ ನಿರ್ಮಾಣ ಮಾಡಿದ್ದಾರೆ. ಅಡ್ಮಿರಲ್ ದಿನೇಶ್ ತ್ರಿಪಾಠಿ ಅವರು ಮೇ 1 ರಂದು ಭಾರತೀಯ ನೌಕಾಪಡೆಯ ಕಮಾಂಡರ್ ಆಗಿ ಅಧಿಕಾರ ವಹಿಸಿಕೊಂಡಿದ್ದು, ಲೆಫ್ಟಿನೆಂಟ್ ಜನರಲ್ ದ್ವಿವೇದಿ ಅವರು ಭಾರತೀಯ ಸೇನಾ ಮುಖ್ಯಸ್ಥರಾಗಿ ನಾಳೆ ಅಧಿಕಾರ ವಹಿಸಿಕೊಳ್ಳಲಿದ್ದು ಹೊಸ ಇತಿಹಾಸ ನಿರ್ಮಾಣ ಮಾಡಲು ಸಜ್ಜಾಗಿದ್ದಾ-ರೆ. ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ ಮತ್ತು ಭಾರತೀಯ ಸೇನಾ ಪಡೆಯ ನಿಯೋಜಿತ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಉಪೇಂದ್ರ ದ್ವಿವೇದಿ ಅವರು 1970 ರ ದಶಕದ ಆರಂಭದಲ್ಲಿ 5ನೇ ತರಗತಿಯಿಂದ ಶಾಲೆಯಲ್ಲಿ ಒಟ್ಟಿಗೆ ವ್ಯಾಸಂಗ ಮಾಡಿದ್ದರು. ಭಾರತೀಯ ಸೇನಾ ಇತಿಹಾಸದಲ್ಲಿ ಮೊದಲ ಬಾರಿಗೆ ಇಬ್ಬರು ಸಹಪಾಠಿಗಳಾದ ಲೆಫ್ಟಿನೆಂಟ್ ಜನರಲ್ ಉಪೇಂದ್ರ ದ್ವಿವೇದಿ ಮತ್ತು ಅಡ್ಮಿರಲ್ ದಿನೇಶ್ ತ್ರಿಪಾಠಿ ಭಾರತೀಯ ಸೇನೆ ಮತ್ತು ನೌಕಾಪಡೆಯ ಸೇವಾ ಮುಖ್ಯಸ್ಥರಾಗಲಿದ್ದು ಮಹತ್ವದ ಸಂಗತಿಯಾಗಿದೆ. ಲೆಫ್ಟಿನೆಂಟ್ ಜನರಲ್ ದ್ವಿವೇದಿ ಅವರ ರೋಲ್ ಸಂ-ಖ್ಯೆ 931 ಮತ್ತು ಅಡ್ಮಿರಲ್ ತ್ರಿಪಾಠಿ ಅವರ ರೋಲ್ ಸಂಖ್ಯೆ 938 ಆಗಿದ್ದರಿಂದ ಇಬ್ಬರು ಅಧಿಕಾರಿಗಳೂ ಶಾಲಾ ದಿನದಿಂದಲೂ ಉತ್ತಮ ಸ್ನೇಹ ಸಂಬಂಧ ಹೊಂದಿದ್ದರು. ಇದೀಗ ಭಾರತೀಯ ಸೇನೆಯಲ್ಲಿ



ಮಹತ್ವದ ಜವಾಬ್ದಾರಿ ಹೊತ್ತಿದ್ದಾರೆ. ಸೇನೆಯ ಹಿರಿಯ ನಾಯಕತ್ವದ ನಡುವಿನ ಬಲವಾದ ಸ್ನೇಹ ಪಡೆಗಳ ನಡುವಿನ ಕಾರ್ಯ ಸಂಬಂಧವನ್ನು ಬಲಪಡಿಸುವಲ್ಲಿ ಬಹಳಷ್ಟು ಮುಖ್ಯವಾಗಿದೆ ಎಂದು ಎಂದು ಇಬ್ಬರೂ ಅಧಿಕಾರಿಗಳನ್ನು ಹತ್ತಿರದಿಂದ ಬಲ್ಲ ರಕ್ಷಣಾ ಅಧಿಕಾರಿಯೊಬ್ಬರು ಈ ವಿಷಯ ತಿಳಿಸಿದ್ದಾರೆ. "50 ವರ್ಷಗಳ ನಂತರ ಭಾರತೀಯಸೇನೆ ಮುನ್ನಡೆಸುವ ಇಬ್ಬರು ಸಹಪಾಠಿಗಳು ಸಿಕ್ಕಿರುವುದು ಹೆಮ್ಮೆಯ ಕ್ಷಣ. ಇದೊಂದು ಅಪರೂಪದ ಸಾಧನೆ ಎಂದು ರಕ್ಷಣಾ ಸಚಿವಾಲಯದ ವಕ್ತಾರ ಭರತ್ ಭೂಷಣ್ ಬಾಬು ಟ್ವೀಟ್‌ನಲ್ಲಿ ತಿಳಿಸಿದ್ದಾರೆ. ಲೆಫ್ಟಿನೆಂಟ್ ಜನರಲ್ ದ್ವಿವೇದಿ ಅವರು ಉತ್ತರ ಸೇನಾ ಕಮಾಂಡರ್ ಆಗಿ ಸುದೀರ್ಘ ಅಧಿಕಾರಾವಧಿಯನ್ನು ಹೊಂದಿದ್ದರು, ಅಲ್ಲಿ ಅವರು ಪೂರ್ವ ಲಡಾಖ್‌ನಲ್ಲಿನ ಎಲ್‌ಎಸಿಯಲ್ಲಿನ ಮಿಲಿಟರಿ ಸ್ಟ್ಯಾಂಡ್‌ಫ್‌ನಲ್ಲಿ ನಡೆಯುತ್ತಿರುವ ಕಾರ್ಯಾಚರಣೆಗಳಿಗೆ ದೀರ್ಘಾವಧಿಯ ಮಾನ್ಯತೆ ಹೊಂದಿದ್ದಾರೆ. ಲೆಫ್ಟಿನೆಂಟ್ ಜನರಲ್ ಉಪೇಂದ್ರ ದ್ವಿವೇದಿ ಅವರು 1964ರ ಜುಲೈ 1 ರಂದು ಜನಿಸಿದ ಅವರು 1984ರ ಡಿಸೆಂಬರ್ 15 ರಂದು ಭಾರತೀಯ ಸೇನೆಯ ಜಮ್ಮು ಮತ್ತು ಕಾಶ್ಮೀರ ರೈಫಲ್ಸ್‌ಗೆ ನಿಯೋಜನೆ ಮೂಲಕ ಸೇವೆ ಆರಂಭಿಸಿದ್ದರು.

## ಪ್ರಧಾನಿ ಅವರಿಂದ ಕರ್ನಾಟಕದ ಬೇಡಿಕೆಗಳ ಬಗ್ಗೆ ಪರಿಶೀಲನೆ ಭರವಸೆ: ಡಿಸಿಎಂ ಡಿ.ಕೆ.ಶಿ



ಬೆಂಗಳೂರು:-

ಕರ್ನಾಟಕದ ತೆರಿಗೆ ಪಾವತಿಗೆ ಅನುಗುಣವಾಗಿ ಅನುದಾನ ನೀಡಬೇಕೆಂಬ ಬೇಡಿಕೆಯನ್ನು ಕೂಲಂಕುಷವಾಗಿ ಪರಿಶೀಲಿಸುವ ಭರವಸೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ನೀಡಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿ ಬಳಿಕ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ರಾಜ್ಯದ ಅನೇಕ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಯಿತು. ಭದ್ರಾ ಮೇಲ್ದಂಡೆ, ಮೇಕೆದಾಟು, ಮಹದಾಯಿ, ಬೆಂಗಳೂರಿನ ಮೆಟ್ರೋ, ಪೆರಿಫೆರಲ್ ರಿಂಗ್ ರಸ್ತೆ, ಟನಲ್ ರಸ್ತೆ ಸೇರಿದಂತೆ ರಾಜ್ಯದಲ್ಲಿ ಬಾಕಿ ಇರುವ ಯೋಜನೆಗಳ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಯಿತು ಎಂದರು. ಅತ್ಯಂತ ಸೌಹಾರ್ದಯುತ ಭೇಟಿ ಇದಾಗಿತ್ತು. ಸುಮಾರು 40 ನಿಮಿಷಗಳ ಕಾಲ ನಾನು, ಸಿಎಂ ಸಿದ್ದರಾಮಯ್ಯ ಅವರು, ಸಚಿವರಾದ ಪರಮೇಶ್ವರ, ಮಹದೇವಪ್ಪ ಅವರು ಪ್ರಧಾನಿ ಮೋದಿ ಅವರ ಜೊತೆ ಚರ್ಚೆ ನಡೆಸಿದೆವು ಎಂದು ಹೇಳಿದರು. ಗುಜರಾತಿನಲ್ಲಿ ಇರುವಂತೆ ಕರ್ನಾಟಕಕ್ಕೂ ಗಿಫ್ಟ್ ಸಿಟಿ ಅವಕಾಶ ಮಾಡಿಕೊಡಬೇಕು ಎಂದು ಮನವಿ ಸಲ್ಲಿಸಲಾಯಿತು. ದೇಶದಲ್ಲಿ ಒಂದು ಕಡೆ ಮಾತ್ರ ಮಾಡಲು ಅವಕಾಶವಿದೆ. ಇದರ ಬಗ್ಗೆ ಆಲೋಚನೆ ಮಾಡಲಾಗುವುದು ಎಂದು ಪ್ರಧಾನಿಯವರು ಭರವಸೆ ನೀಡಿದ್ದಾರೆ ಎಂದರು.

ಬೆಂಗಳೂರಿನ ಅಭಿವೃದ್ಧಿಗಾಗಿ ಬೇಡಿಕೆ ಸಲ್ಲಿಸಲಾಯಿತೇ ಎಂದು ಕೇಳಿದಾಗ "ಜಲಸಂಪನ್ಮೂಲ, ನಗರಾಭಿವೃದ್ಧಿ, ಫೆರಿಫೆರಲ್ ರಿಂಗ್ ರಸ್ತೆ, ಮೆಟ್ರೋ ಬಗ್ಗೆ ಪ್ರಸ್ತಾಪ ಮಾಡಿದ್ದೇವೆ. ಇನ್ನೊಮ್ಮೆ ಕೆಲವು ಮಾಹಿತಿಗಳ ಜತೆ ಬನ್ನಿ ಎಂದು ತಿಳಿಸಿದ್ದಾರೆ. ಮಂತ್ರಿಗಳು ಹಾಗೂ ಅಧಿಕಾರಿಗಳ ಜತೆ ಸಭೆ ನಡೆಸಲಾಗುವುದು. ಒಟ್ಟಾರೆ ರಾಜ್ಯದ ಅಭಿವೃದ್ಧಿ ವಿಚಾರದಲ್ಲಿ ನಾವೆಲ್ಲಾ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ, ನೀವು ಅವಕಾಶ ಕೊಡಿ ಎಂದು ಮನವಿ ಮಾಡಿದ್ದೇವೆ" ಎಂದರು. ಜುಲೈ 3 ರ ನಂತರ ರಾಹುಲ್ ಗಾಂಧಿ ಅವರ ಭೇಟಿ ರಾಹುಲ್ ಗಾಂಧಿ ಅವರ ಭೇಟಿಯ ಬಗ್ಗೆ ಕೇಳಿದಾಗ "ಶನಿವಾರ ಸಂಜೆ ದೆಹಲಿಗೆ ಬಂದ ಕಾರಣ ಭೇಟಿ ಸಾಧ್ಯವಾಗಲಿಲ್ಲ.

## ಕ.ಸಾ.ಪ. ಸರ್ವಾಧ್ಯಕ್ಷೆ ಲಲಿತಾನಾಯಕ್ ಆಯ್ಕೆಗೆ ಮನವಿ

ಬೆಂಗಳೂರು:-

ಲೇಖಕಿ ಡಾ.ಬಿ.ಟಿ ಲಲಿತಾನಾಯಕ್ ಅವರನ್ನು ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಮಹೇಶ್ ಜೋಷಿರವರಿಗೆ ಮನವಿ ಸಲ್ಲಿಸಿದೆ. ಅಕ್ಷರ ಸಂಸ್ಕೃತಿಯಲ್ಲದ ಜನಾಂಗದಿಂದ ಕನ್ನಡ ಸಾರಸ್ವತಲೋಕದಲ್ಲಿ ತಮ್ಮದೇ ಛಾಪುಮೂಡಿಸಿ, ಕನ್ನಡ ನಾಡು ನುಡಿಗೆ ಅಪಾರ ಸೇವೆ ಸಲ್ಲಿಸಿ ಪ್ರಗತಿಪರಸಾಹಿತಿಗಳಾಗಿ ಗುರುತಿಸಿಕೊಂಡಿರುವ ಡಾ.ಬಿ.ಟಿ.ಲಿಲಿತಾನಾಯಕ್ ಇವರಿಗೆ 75 ವರ್ಷ ತುಂಬಿದೆ. ಈ ಸಂದರ್ಭದಲ್ಲಿ ಗೌರವ ಸಲ್ಲಿಸಲು ಮಂಡ್ಯದಲ್ಲಿ ನಡೆಯಲಿರುವ ಕನ್ನಡ ಸಾಹಿತ್ಯ ಸಮ್ಮೇಳನದ



ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡುವಂತೆ ಬಂಜಾರ ಭಾಷಾ ಅಕಾಡಮಿ ಅಧ್ಯಕ್ಷರಾದ ಡಾ ಗೋವಿಂದಸ್ವಾಮಿ, ಸದಸ್ಯರಾದ ಶಾಂತ ನಾಯಕ್, ಪಳಮಿಸ್ವಾಮಿ ಜಾಗೇರಿ, ಡಾ.ರವಿನಾಯಕ್, ಆರ್.ಬಿ.ನಾಯಕ್ ಭಾರತಿ ಭಾಯಿ ಹಾಗೂ ಸರ್ವಸದಸ್ಯರು ಅಕಾಡಮಿ ಮೊದಲ ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಿ ಎಂದು ಮನವಿ ಮಾಡಿದ್ದಾರೆ.

## ಜೈವಿಕವಾಗಿ ವಿಘಟನೆಯಾಗುವ ಕ್ಯಾರಿಬ್ಯಾಗ್ ಗೆ ಅನುಮತಿ: ಈಶ್ವರ ಖಂಡ್ರೆ



ಬೆಂಗಳೂರು:-

ಜೈವಿಕವಾಗಿ ವಿಘಟನೆಯಾಗುವ ಮತ್ತು 180 ದಿನಗಳಲ್ಲಿ ಕರಗಿಹೋಗುವ ಸಸ್ಯ ಜನ್ಯ ಪಾಲಿ ಲಿಕ್ವಿಡ್ ಆಸಿಡ್ ಪೋಲಿಮರ್ ಕೈಚೀಲ (ಕ್ಯಾರಿ ಬ್ಯಾಗ್)ಗಳ ತಯಾರಿಕೆ, ದಾಸ್ತಾನು, ಮಾರಾಟಕ್ಕೆ ಅವಕಾಶ ಆಗುವಂತೆ ತುರ್ತು ಕ್ರಮ ಕೈಗೊಳ್ಳಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮಣ್ಣಲ್ಲಿ ಮಣ್ಣಾಗದ, ನೀರಲ್ಲಿ ಕರಗದ, ಸುಟ್ಟ-ರೆ ವಾತಾವರಣವನ್ನೇ ಕಲುಷಿತಗೊಳಿಸುವ ಏಕ ಬಳಕೆ ಪ್ಲಾಸ್ಟಿಕ್ ಈ ಪರಿಸರಕ್ಕೆ ಮಾರಕವಾಗಿದ್ದು.

ಇದಕ್ಕೆ ಪರ್ಯಾಯವಾಗಿ ಜೈವಿಕವಾಗಿ ಕೊಳೆಯುವಂತಹ ಉತ್ಪನ್ನದ ಅಗತ್ಯ ಹಿಂದೆಂದಿಗಿಂತಲೂ ಇಂದು ಹೆಚ್ಚಾಗಿದೆ ಎಂದರು. ಈ ನಿಟ್ಟಿನಲ್ಲಿ ಜೈವಿ ಕವಾಗಿ ವಿಘಟನೆಯಾಗುವ ಸಸ್ಯಜನ್ಯ ಪಾಲಿ ಲಿಕ್ವಿಡ್ ಆಸಿಡ್ ಪೋಲಿಮರ್ ಚೀಲಗಳ ತಯಾರಿಕೆ, ದಾಸ್ತಾನು ಮತ್ತು ಮಾರಾಟಕ್ಕೆ ತೊಡಕಾಗಿರುವ ಕರ್ನಾಟಕ ಸರ್ಕಾರದ 2016ರ ಅಧಿಸೂಚನೆಗೆ ತಿದ್ದುಪಡಿ ತಂದು ಇಲ್ಲವೆ ಹಿಂಪಡೆದು, ಕೇಂದ್ರ ಪರಿಸರ ಇಲಾಖೆಯ 2021ರ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು. ಮೆಕ್ಕೆಜೋಳದ ಸಾರದಿಂದ ತಯಾರಿಸುವ ಕೈಚೀಲಗಳು 6 ತಿಂಗಳುಗಳಲ್ಲಿ ಇಟ್ಟಲ್ಲಿಯೇ ಕರಗಿ ಹೋಗುತ್ತವೆ ಎಂದು ಸಭೆಗೆ ಪರಿಸರ ಅಧಿಕಾರಿಗಳು ವಿವರಿಸಿದರು. ಇದಕ್ಕೆ ಸ್ಪಂದಿಸಿದ ಸಚಿವರು ಈ ಕೈಚೀಲಗಳು ಪರಿಸರಕ್ಕೆ ಹಾನಿಕಾರಕವಲ್ಲ ಮತ್ತು ವೈಜ್ಞಾನಿಕವಾಗಿ ವಿಘಟನೆಯಾಗುತ್ತದೆ ಎಂದು ಸಾಬೀತಾಗಿದ್ದಲ್ಲಿ, ಇದಕ್ಕೆ ಶೀಘ್ರ ಅನುಮತಿ ನೀಡಿ ಎಂದರು. ಈ ಪೋಲಿಮರ್ ಕೈಚೀಲಗಳ ದರ ಕೂಡ ಪ್ರಸ್ತುತ ಲಭ್ಯವಿರುವ ಏಕ ಬಳಕೆ ಪ್ಲಾಸ್ಟಿಕ್ ಕೈಚೀಲಗಳ ದರದಲ್ಲೇ ಲಭ್ಯವಾದರೆ ಯಾರೂ ಆಗ ಪ್ಲಾಸ್ಟಿಕ್ ಕ್ಯಾರಿಬ್ಯಾಗ್ ಖರೀದಿಸುವುದಿಲ್ಲ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

## ಚಿತ್ರಮಂದಿರಗಳು, ಸಬ್ಸಿಡಿ ಬಗ್ಗೆ ಗಮನ ಹರಿಸಿ, ಆರ್ಥಿಕ ನೆರವು ನೀಡ್ತೀವಿ: ಸಿಎಂ

ಬೆಂಗಳೂರು:-

ಚಿತ್ರಮಂದಿರಗಳು ಮತ್ತು ಸಬ್ಸಿಡಿ ಬಗ್ಗೆ ಗಮನ ಹರಿಸಿ, ಆರ್ಥಿಕ ನೆರವು ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ತಿಳಿಸಿದ್ದಾರೆ.

ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ನೂತನ ಕಟ್ಟಡ ಉದ್ಘಾಟನೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಕನ್ನಡ ಚಿತ್ರರಂಗದ ಬೆಳವಣಿಗೆಗೆ ಎಷ್ಟು ಸಾಧ್ಯವೋ ಅಷ್ಟು ಸಹಕಾರವನ್ನು ಸರ್ಕಾರದಿಂದ ನೀಡಲಾಗುವುದು ಎಂದರು.



ಕನ್ನಡದಲ್ಲಿ ಓಟಿಟಿ ವೇದಿಕೆ ತರಲು, ಸಂಬಂಧ ಪಟ್ಟವರ ಜೊತೆ ಮಾತನಾಡುತ್ತೀನಿ. ಡಾ.ರಾಜಕುಮಾರ್ ಕನಸಿನಂತೆ ಖಂಡಿತಾ ಒಂದು ಫಿಲ್ಮ್ ಸಿಟಿ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ ಮುಖ್ಯಮಂತ್ರಿ, ನೆನ್ನೆ ದೆಹಲಿಗೆ ಹೋಗಿದ್ದೆ. ಇವತ್ತು ಬರೋ ಸಾಧ್ಯತೆ ಕಮ್ಮಿ ಇತ್ತು.. ಕನ್ನಡ ಚಿತ್ರರಂಗದ ಮೇಲೆ ನನಗೆ ಅಪಾರ ಗೌರವವಿದ್ದು, ಮಿಸ್ ಮಾಡದೇ ಬರಬೇಕು ಅಂತಾ ಬಂದಿದ್ದೀನಿ ಎಂದರು.

# ಮಾದಕ ವಸ್ತುಗಳ ಸೇವನೆ ಅತ್ಯಂತ ಅಪಾಯಕಾರಿ: ಎಂ ಶಿವಮೂರ್ತಿ

ಕಲಬುರಗಿ:–

ಮಾದಕ ವಸ್ತುಗಳ ವ್ಯಸನ ಮನುಷ್ಯನ ಕ್ರಿಯಾಶೀಲ ಅಲೋಚನಾ ಕ್ರಮವನ್ನೆ ಸಂಕುಚಿತಗೊಳಿಸಿ ಅವನ ಸರ್ವತೋಮುಖ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ. ಆದರಲ್ಲೂ ಹದಿಹರೆಯದ ವಯಸ್ಸಿನಲ್ಲಿ ಮಾದಕ ವಸ್ತುಗಳ ಸೇವನೆ ಅತ್ಯಂತಅಪಾಯಕಾರಿ ಪರಿಣಾಮಗಳನ್ನು ಬೀರುತ್ತದೆ, ವ್ಯಸನಕ್ಕೆ ಒಳಗಾದ ವ್ಯಕ್ತಿ ಸಾಮಾಜಿಕವಾಗಿ, ಆರ್ಥಿಕವಾಗಿ, ಮಾನಸಿಕವಾಗಿ ಮತ್ತು ಶೈಕ್ಷಣಿಕವಾಗಿ ಯಾವುದೇ ಸ್ಥಿತಿಯನ್ನು ಎದುರಿಸಲಾರದ ಸ್ಥಿತಿಯನ್ನು ತಲುಪುತ್ತಾನೆ. ಇಂದುಯುವತಲೆವಾರುಎಚ್ಚೆತ್ತುಕೊಂಡುಅಂತಹ ಚಟುವಟಿಕೆಗಳಿಂದ ದೂರ ಉಳಿಯಬೇಕೆಂಬ ಕಿವಿಮಾತನ್ನು ವಿದ್ಯಾರ್ಥಿ ಮತ್ತುಯುವ ಸಮುದಾಯಕ್ಕೆಕಡಗಂಚಿಯಲ್ಲಿ ಆಯೋಜಿಸಿದ್ದ ಇನ್‌ಸಟಿಟ್ಯೂಟ್ ಫಾರ್ ಸೋಷಿಯಲ್ ವರ್ಕರ್ಸ್ ಫಾರ್ ಆಕ್ಷನ್ ರೀಸರ್ಚ್(ರಿ), ಮೈಸೂರು, ಸಾಯಿಪ್ರತಾಪ ಕಲಾ ಮತ್ತು ವಾಣಿಜ್ಯ ಪದವಿ ಮಹಾ ವಿದ್ಯಾಲಯ, ಕಡಗಂಚಿಮತ್ತುಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ನೌಕರರ ಕ್ಷೇಮಾಭಿವೃದ್ಧಿ ಸಂಘ(ರಿ), ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ, ಕಲಬುರಗಿ ಇವರ ಸಹಯೋಗದಲ್ಲಿ "ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಜನಜಾಗೃತಿಕಾರ್ಯಕ್ರಮ"26 ಜೂನ್ 2024 ರಿಂದ ಸಪ್ತಾಹಘೋಷವಾಕ್ಯ: ಸಾಕ್ಷಿಗಳು ಸ್ಪಷ್ಟವಾಗಿವೆ: ತಡೆಗಟ್ಟುವುದನ್ನು ಪ್ರೋತ್ಸಾಹಿಸೋಣಕಾರ್ಯಕ್ರಮದಲ್ಲಿಸಾವ ರ್ಜನಿಕ ಆಡಳಿತ ವಿಭಾಗದ ಸಹಾಯಕ ಪ್ರಾಧ್ಯಾಪಕಡಾ.ಕಿರಣ್ ಎಂ.ಗಾಜನೂರುಕಾರ್ಯಕ್ರಮದಉದ್ಘಾಟನೆಯನ್ನು ನೆರವೇರಿಸಿ



ಸಲಹೆಯನ್ನುನೀಡಿದರು.

ಅಂತರರಾಷ್ಟ್ರೀಯ ಮಾದಕವಸ್ತು ಸಮಸ್ಯೆಯು ಲಕ್ಷಾಂತರಜನರಜೀವನದ ಮೇಲೆ ಪರಿಣಾಮ ಬೀರುವ ಸಂಕೀರ್ಣ ಸಮಸ್ಯೆಯಾಗಿದೆ. ಮಾದಕ ದ್ರವ್ಯಗಳ ಪರಿಣಾಮಗಳು ವ್ಯಾಪಕ ಮತ್ತು ಬಹುಮುಖಿಯಾಗಿದ್ದು, ಮಾದಕವಸ್ತು ಬಳಕೆಯ ಅಸ್ವಸ್ಥತೆ ಹೊಂದಿರುವಜನರಿಂದ ಹಿಡಿದು ಮಾದಕವಸ್ತು ಕಳ್ಳಸಾಗಣೆ ಮತ್ತು ಸಂಘಟಿತಅಪರಾಧದಿಂದಉಂಟಾಗುವ ಪರಿಣಾಮಗಳೊಂದಿಗೆ ವ್ಯವಹರಿಸುವ ಸಮುದಾಯಗಳವರೆಗೆ ಪ್ರತಿಯೊಬ್ಬರ ಮೇಲೆ ಪರಿಣಾಮ ಬೀರುತ್ತದೆ. ಈ ಪರಿಸ್ಥಿತಿಯನ್ನು ನಿಭಾಯಿಸಲು ವೈಜ್ಞಾನಿಕವಾಗಿ ಬೆಂಬಲಿತ, ತಡೆಗಟ್ಟುವಿಕೆ ಮತ್ತುಚಿಕಿತ್ಸೆ–ಕೇಂದ್ರಿತ ವಿಧಾನವನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾನಿಲಯದ, ಸಮಾಜಕಾರ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದಡಾ. ಎಂ ಶಿವಮೂರ್ತಿ ಅಭಿಪ್ರಾಯ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ.ಡಿ.ಶ್ರೀನಿವಾಸ ಮಣಗಳ್ಳಿ, ಸಲಹೆಗಾರ ಮಂಡಳಿ ಸದಸ್ಯರು, ಮೈಸೂರು ಹಾಗೂ ಸಹಾಯಕ ಪ್ರಾಧ್ಯಾಪಕರುಕರ್ನಾಟಕಕೇಂದ್ರೀಯ ವಿಶ್ವವಿದ್ಯಾಲಯ, ಇವರುಈ ವರ್ಷದಜೂನ್ 26ರಂದು ವಿಶ್ವದಾದ್ಯಂತಡ್ರ ದುರುಪಯೋಗ ಮತ್ತುಅಕ್ರಮ ಸಾಗಣೆ ವಿರುದ್ಧ 37ನೇ ಅಂತರರಾಷ್ಟ್ರೀಯ ದಿನವನ್ನುಆಚರಿಸಲಾಗುತ್ತದೆ. 1987ರಿಂದ, ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರಗಳು ಮಾದಕ ವ್ಯಸನದಿಂದ ಮುಕ್ತವಾದಜಗತ್ತಿಗೆ ಸಹಕರಿಸಲುತಮ್ಮ ಸಮರ್ಪಣೆಯನ್ನು ಪ್ರದರ್ಶಿಸಲು ಈ ದಿನವನ್ನು ಸ್ಮರಿಸುತ್ತಿವೆ. ಈ ವರ್ಷದ ವಿಶ್ವಡ್ರಗ್ಸ್‌ಅಭಿಯಾನವು ವಿಜ್ಞಾನ, ಸಂಶೋಧನೆ, ಸಹಾನುಭೂತಿ, ಮಾನವ ಹಕ್ಕುಗಳಿಗೆ ಸಂಪೂರ್ಣಗೌರವ ಮತ್ತು ಸಮಾಜ, ಆರ್ಥಿಕತೆ ಮತ್ತು ಆರೋಗ್ಯದ ಮೇಲೆ ಮಾದಕವಸ್ತು ಬಳಕೆಯ ಋಣಾತ್ಮಕ ಪರಿಣಾಮಗಳ ಸಂಪೂರ್ಣಗ್ರಹಿಕೆಯನ್ನು ಆಧರಿಸಿದ ಔಷಧ ನೀತಿಯನ್ನು ಆಧರಿಸಿರಬೇಕು. ಅರ್ಥಪೂರ್ಣಜೀವನವನ್ನು ನಡೆಸುವ ಸಾಮರ್ಥ್ಯವನ್ನು ಹೊಂದಿರುವಜಗತ್ತನ್ನು ನಾವು ಮಾಡಬಹುದು.ಈ ಪರಿಸ್ಥಿತಿಯನ್ನು ನಿಭಾಯಿಸಲು ವೈಜ್ಞಾನಿಕವಾಗಿ ಬೆಂಬಲಿತ, ತಡೆಗಟ್ಟುವಿಕೆ ಮತ್ತುಚಿಕಿತ್ಸೆ–ಕೇಂದ್ರಿತ ವಿಧಾನವನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ವಿದ್ಯಾರ್ಥಿಗನ್ನುದ್ದೇಶಿಸಿ ಮಾತನಾಡಿದರು.

ಒಗ್ಗಟ್ಟು, ಸಹಾನುಭೂತಿ ಮತ್ತು ವಿಜ್ಞಾನದ ಮೌಲ್ಯಗಳಿಗೆ ಬದ್ಧವಾಗಿರುವಾಗ ಪ್ರಪಂಚದ ಮಾದಕದ್ರವ್ಯ ಬಿಕ್ಕಟ್ಟನ್ನು ಪರಿಹರಿಸಲು ನಮ್ಮ ಪ್ರಯತ್ನಗಳನ್ನು ತೀವ್ರಗೊಳಿಸೋಣ. ಒಟ್ಟಾಗಿ, ಸಾಕ್ಷ್ಯಾಧಾರಿತ ಪರಿಹಾರಗಳಿಗೆ ಬದ್ಧರಾಗುವ ಮೂಲಕ ಪ್ರತಿಯೊಬ್ಬರೂಆರೋಗ್ಯಕರ, ಅರ್ಥಪೂರ್ಣಜೀವನವನ್ನು ನಡೆಸುವ ಸಾಮರ್ಥ್ಯವನ್ನು ಹೊಂದಿರುವಜಗತ್ತನ್ನು ನಾವು ಮಾಡಬಹುದು. ಕೇವಲ ಹಸಿದವರಿಗೆ ಆಹಾರ ನೀಡುವ ಮೂಲಕ ನಾವು ಹಸಿವಿನ ಸಮಸ್ಯೆಯನ್ನು ಪರಿಹರಿಸಲು ಸಾಧ್ಯವಿಲ್ಲ; ನಾವು ಹಸಿವನ್ನು ಸೃಷ್ಟಿಸುವ ವ್ಯವಸ್ಥೆಗಳನ್ನು ತೊಡೆದು ಹಾಕಬೇಕು ಅದರಂತೆಯೇ ಇದರ ನಿರ್ಮೂಲನೆಯ ಆಗಬೇಕೆಂದು ವಿದ್ಯಾರ್ಥಿಗಳಿಗೆ ಅಧ್ಯಕ್ಷತೆಡಾ.ಸುನಿಲ್ ಕುಮಾಕಾಂಬ್ಳೆ, ಅದ್ಯಕ್ಷರು, ಸಾಯಿ ಪ್ರತಾಪ ಶಿಕ್ಷಣ ಸಂಸ್ಥೆ, ಕಡಗಂಚಿಕಿವಿಮಾತನ್ನು ತಿಳಿಸಿದರು.

ಮಾದಕ ವ್ಯಸನವು ಸಾಮಾಜಿಕ ನಿಷೇಧವಾಗಿದೆ ಮತ್ತು ಪ್ರತಿಧರ್ಮದಿಂದಲೂ ನಿಷೇಧಿಸಲಾಗಿದೆ. ಮಾದಕವಸ್ತುಗಳ ಪ್ರಲೋಭನೆಯನ್ನು ವಿರೋಧಿಸುವ ಮೂಲಕ ನಾವು ಬಲಶಾಲಿ ಎಂದು ಸಾಬೀತುಪಡಿಸಬೇಕು, ಏಕೆಂದರೆ ವಿವೇಚನೆಯು ನಡವಳಿಕೆಯ ಉತ್ತಮ ಭಾಗವಾಗಿದೆಎಂದುಕಾರ್ಯಕ್ರಮದನಿರೂಪಣೆಯನ್ನುಡಾ.ಶಿವಾನಂದ್ ಎಂ. ಬೂಸನೂರು, ಪ್ರಾಂಶುಪಾಲರು, ಸಾಯಿ ಪ್ರತಾಪ ಶಿಕ್ಷಣ ಸಂಸ್ಥೆ, ಕಡಗಂಚಿತಿಳಿಸಿದರು. ಡಾ.ಮಹದೇವಸ್ವಾಮಿ ಡಿ, ಅದ್ಯಕ್ಷರು, ಮೈಸೂರುಮತ್ತು ಸಂಸ್ಥೆಯಅದ್ಯಾಪಕರು ಮತ್ತು ಅದ್ಯಾಪಕೇತರು ಸಿಬ್ಬದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಹಾಸ್ಟೆಲ್ ಕೆಲಸಗಾರರ ಸಮಸ್ಯೆ ಪರಿಹಾರಕ್ಕೆ ಶಾಸಕರಿಗೆ ಮನವಿ



ಹೊಸಪೇಟೆ:–

ಶಾಲಾ, ಕಾಲೇಜು ಹಾಸ್ಟೆಲ್‌ಗಳಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ಸಿಬ್ಬಂದಿ ಬೇಡಿಕೆ ಈಡೇರಿಸಬೇಕು ಎಂದು ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದಿಂದ ಶಾಸಕ ಎಚ್.ಆರ್. ಗವಿಯಪ್ಪನವರಿಗೆ ಮನವಿಪತ್ರ ಸಲ್ಲಿಸಲಾಯಿತು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಘದಲ್ಲಿ ಕಳೆದ 15 ರಿಂದ 20 ವರ್ಷಗಳಿಂದ ಕಡಿಮೆ ಸಂಬಳಕ್ಕೆ ಶಾಲಾ, ಕಾಲೇಜುಗಳ ವಸತಿ ನಿಲಯಗಳಲ್ಲಿ ಕೆಲಸ ಮಾಡುತ್ತಿರುವ, ಅಡುಗೆ ಸಹಾಯಕರು, ಸ್ವಚ್ಛತಾಗಾರರು, ಕಾವಲುಗಾರರು, ಡಿ ಗ್ರೂಪ್ ಅಟೆಂಡರ್, ಕಂಪ್ಯೂಟರ್ ಆಪರೇಟರ್ ಗಳು ಯಾವುದೇ ಭದ್ರತೆ ಇಲ್ಲದೆ ಕೆಲಸ ಮಾಡುತ್ತಾ ಬಂದಿದ್ದಾರೆ. ಇವರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿದರು.

**ಬೇಡಿಕೆಗಳು:** ಹಾಸ್ಟೆಲ್‌ಗಳ ಹೊರಗುತ್ತಿಗೆ ನೌಕರರಿಗೆ ನೇರವಾಗಿ ಇಲಾಖೆಯಿಂದ ವೇತನ ಕೊಡಬೇಕು. ನಿವೃತ್ತಿವರೆಗೆ ಸೇವಾ ಭದ್ರತೆ ಕೊಡಬೇಕು. 10 ವರ್ಷಗಳಿಂದ ಸೇವೆ ಸಲ್ಲಿಸಿರುವ ಹೊರಗುತ್ತಿಗೆ ಸಿಬ್ಬಂದಿಗಳನ್ನು ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮದ ಅಡಿಯಲ್ಲಿ ಎಲ್ಲರನ್ನೂ ತರಬೇಕು. ಕಾರ್ಮಿಕ ಇಲಾಖೆಯ ಕನಿಷ್ಟ ವೇತನ ಪರಿಷ್ಕರಣ ಸಮಿತಿ ಸಭೆ ಸೇರಿ ತೀರ್ಮಾನ ಮಾಡಿ ಕನಿಷ್ಟ ವೇತನ 31 ಸಾವಿರ ರು. ಕೊಡಬೇಕು. ಕಾರ್ಮಿಕ ಇಲಾಖೆಯ ಕಾನೂನು ಪ್ರಕಾರ ವಾರದ ರಜೆ ಕೊಡಬೇಕು. ಕೆಲಸದ ಸಮಯ ನಿಗದಿ ಆಗಬೇಕು. ಪ್ರತಿ ತಿಂಗಳು 5ನೇ ತಾರೀಖು ಸಂಬಳ ಕೊಡಬೇಕು. ಬಾಕಿ ಇರುವ ಸಂಬಳವನ್ನು ತಕ್ಷಣ ಪಾವತಿ ಮಾಡಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಸಮಾನ ಕೆಲಸಕ್ಕೆ ಸಮಾನ ವೇತನ ಕೊಡಬೇಕು. ನಿವೃತ್ತಿ ನಂತರ ಜೀವನ ನಿರ್ವಹಣೆಗೆ 10 ಲಕ್ಷ ರು. ಪರಿಹಾರ ಕೊಡಬೇಕು. ಕಾಯಂ ನೌಕರರ ಸ್ಥಳಗಳಿಗೆ ಕಾಯಂ ನೌಕರರನ್ನು ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು. ಬಿಸಿಎಂ ಮತ್ತು ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿಗಳ ಸಂಖ್ಯೆ ಕಡಿತ ಮಾಡಿರುವ ಆದೇಶ ರದ್ದಾಗಬೇಕು. 50 ವಿದ್ಯಾರ್ಥಿಗಳಿಗೆ ಮೂರು ಜನ ಸಿಬ್ಬಂದಿಯಂತೆ ಹಿಂದಿನ ಪದ್ಧತಿ ಮುಂದುವರಿಸಬೇಕು. ಬಿಸಿಎಂ ಇಲಾಖೆಯ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಿಬ್ಬಂದಿ ಸಂಖ್ಯೆ ಹೆಚ್ಚು ಮಾಡಬೇಕು. ವಸತಿ ನಿಲಯ ಮತ್ತು ಹಾಸ್ಟೆಲ್‌ಗಳಿಗೆ ವಾರ್ಡನ್ ರವರು ಮಕ್ಕಳ ಅಡುಗೆಗೆ ಅಗತ್ಯವಾಗಿ ಬೇಕಾದ ಅಹಾರ ಸಾಮಗ್ರಿಗಳನ್ನು ಸರಿಯಾದ ಪ್ರಮಾಣದಲ್ಲಿ ತಂದು ಕೊಡಬೇಕು. ಹೊಸದಾಗಿ ಪ್ರಾರಂಭ ಮಾಡುವ ವಸತಿ ನಿಲಯ ಮತ್ತು ಹಾಸ್ಟೆಲ್‌ಗಳಿಗೆ ಮೀಸಲಾತಿ ಜಾರಿಮಾಡಬೇಕು ಎಂದು ಆಗ್ರಹಿಸಿದರು. ಮುಖಂಡರಾದ ಮರಡಿ ಜಂಬಯ್ಯ ನಾಯಕ, ಬಿಸಾಟಿ ತಾಯಪ್ಪ ನಾಯಕ, ಹನುಮಂತಪ್ಪ, ರಮೇಶ್, ಮಂಜುನಾಥ, ರೇಣುಕಮ್ಮ, ಪದ್ಮಾ ಇತರರು ಹಾಜರಿದ್ದರು.

# ಶಾಸಕ ನಾಗೇಂದ್ರ ಬಂಧನಕ್ಕೆ ಶ್ರೀರಾಮುಲು ಆಗ್ರಹ



ಬಳ್ಳಾರಿ:–

ಮಹರ್ಷಿ ವಾಲ್ಮೀಕಿ ಎಸ್ಟಿ ಅಭಿವೃದ್ಧಿ ನಿಗಮದಲ್ಲಿ ನಡೆದ ಹಣದ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರನ್ನು ಬಂಧಿಸಲು ಮಾಜಿ ಸಚಿವ ಬಿ.ಶ್ರೀರಾಮುಲು ಆಗ್ರಹಿಸಿದ್ದಾರೆ. ಅವರು ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ನಿನ್ನೆಯಿಂದ ಹಗಲು ರಾತ್ರಿ ಧರಣಿ ನಡೆಸಿರುವ ಅವರು ಸಂಜೆವಾಣಿಯೊಂದಿಗೆ ಮಾತನಾಡಿ ಎಸ್ಟಿ ಅಭಿವೃದ್ಧಿ ನಿಗಮದ ಸಚಿವರಾಗಿದ್ದ ಶಾಸಕ ನಾಗೇಂದ್ರ ಅವರನ್ನು ಬಂಧಿಸಬೇಕು. ಅಕ್ರಮ ಬಳಕೆ–ಯ ಸಂಪೂರ್ಣ ಹಣ ರಿಕವರಿ ಆಗಬೇಕು, ಪ್ರಕರಣವನ್ನು ಸಿಬಿಐಗೆವಹಿಸಬೇಕು. ಪ್ರಕರಣದಲ್ಲಿ ಸಾವನ್ನಪ್ಪಿದ ಚಂದ್ರಶೇಖರ ಕುಟುಂಬಕ್ಕೆ ಪರಿಹಾರ ನೀಡಬೇಕು. ಇದರಂತೆ ಇನ್ನಿತರೇ ನಿಗಮಗಳಲ್ಲಿನ ಹಣದ ವರ್ಗಾವಣೆ ಕುರಿತು ತನಿಖೆ ಆಗಬೇಕು ಎಂಬುದು ನಮ್ಮ ಬೇಡಿಕೆಯಾಗಿದೆಂದರು. ಇಷ್ಟು ದಿನ ಇಲ್ಲದ ಎಸ್‌ಟಿ ತಂಡ ಬಿಜೆಪಿ ಪ್ರತಿಭಟನೆ ತೀವ್ರಗೊಳಿಸದ ಬಳಿಕ ಆಕ್ಟಿವ್ ಅಗಿದೆ. ನಿನ್ನೆ ನಿಗಮದ ಎಂಡಿ ಬಳಿಯಿಂದ ಕೋಟಿಗಟ್ಟಲೇ ಹಣ ಜಪ್ತಿ ಮಾಡಿದೆ ಲ್ಯಾಂಬೋರ್ಗಿನ ಕಾರ್ ಜಪ್ತಿ ಮಾಡಲಾಗಿದೆ. ಇದನ್ನು ಕಳೆದೊಂದು ತಿಂಗಳಿಂದ ಯಾ–ಕೆ ಇಷ್ಟೊಂದು ಹಣ ಜಪ್ತಿ ಮಾಡಿರಲಿಲ್ಲ ಎಂದ ಶ್ರೀರಾಮುಲು ಪ್ರಶ್ನಿಸಿದ್ದಾರೆ. ಕೇವಲ ಅಧಿಕಾರಿಗಳಷ್ಟೇ ಅಲ್ಲದೇ ಮಾಜಿ ಸಚಿವ ನಾಗೇಂದ್ರ ಮತ್ತು ಕಾಣದ ಮತ್ತಷ್ಟು ಕೈಗಳಿವೆ. ನಿಗಮದ ಹಣ ಲೂಟಿ ಹೊಡೆಯಲು ಯಾವುದೇ ಕಾರಣಕ್ಕೂ ಬಿಡೋದಿಲ್ಲ. ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಇಲ್ಲವಾದ್ರೇ ಸಿದ್ದರಾಮಯ್ಯ ಅವರನ್ನು ಅನುಮಾನಿಸಬೇಕಾಗ್ತದೆ. ಇದರಲ್ಲಿ ಸಿದ್ದರಾಮಯ್ಯ ಪಾತ್ರ ಇಲ್ಲವಾದ್ರೇ ಸಿಬಿಐಗೆ ವಹಿಸಬೇಕು ಎಂದು ಶ್ರೀರಾಮುಲು ಆಗ್ರಹಿಸಿದರು. ಇಷ್ಟೇ ಅಲ್ಲದೆ ಧರಣಿಯನ್ನು ಇಂದು ಸಹ ಮುಂದುವರೆಸಿದ್ದು ಸಂಜೆ ಮುಗಿಸಲಿದೆ ನಾಗೇಂದ್ರ ಬಂಧನವಾಗೋವರೆಗೂ ಹೋರಾಟ ನಿಲ್ಲೋದಿಲ್ಲ ಅದಕ್ಕಾಗಿ.ರಾಜ್ಯ ಮಟ್ಟದಲ್ಲಿ ಬೃಹತ್ ಹೋರಾಟ, ಬಳ್ಳಾರಿಯಿಂದ ಬೆಂಗಳೂರಿಗೆ ಪಾದಯಾತ್ರೆ ಸೇರಿದಂತೆ ಇನ್ನಿತರ ಹೋರಾಟ ಮಾಡುವ ಚಿಂತನೆ ಇದೆಂದರು. ರಾತ್ರಿಯಿಡಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಮಲಗಿದ್ದ ಶ್ರೀರಾಮುಲು ಜೊತೆಗೆ ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ಮುಖಂಡರುಗಳಾದ ಗುರುಲಿಂಗನಗೌಡ, ಪಾಲಣ್ಣ, ಗೋವಿಂದರಾಜುಲು, ಗುಜರಿ ಅಜೀಜ್ ಮೊದಲಾದವರು ಇದ್ದರು. ಅವರ ನೂರಾರು ಬೆಂಬಲಿಗರು ಸಾತ್ ನೀಡಿದ್ದರು.

# ಜಿಲ್ಲಾ ಪಂಚಾಯತಿ ಯೋಜನಾಧಿಕಾರಿಗಳ ಭೇಟಿ 10ನೇ ತರಗತಿಯ ಮಕ್ಕಳ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಮಠಪತಿ ಸಲಹೆ

ಆಳಂದ:–

ತಾಲೂಕು ಪಂಚಾಯಿತಿ ಕಚೇರಿಗೆ ಭೇಟಿ ನೀಡಿದ ಜಿಲ್ಲಾ ಪಂಚಾಯತಿ ಯೋಜನಾಧಿಕಾರಿಗಳು ಆಡಳಿತ ಸಭೆ ನಡೆಸಿ 10ನೇ ತರಗತಿಯ ಮಕ್ಕಳ ಶೈಕ್ಷಣಿಕ ಗುಣಮಟ್ಟ ಸುಧಾರಣೆ ಕೈಗೊಳ್ಳಿ, ಶಾಲಾ ಶಿಕ್ಷಣ ಮತ್ತು ಮೂಲ ಸೌಲಭ್ಯಗಳ ಕ್ರಮಕೈಗೊಳ್ಳಬೇಕು ಎಂದು ಜಿಪಂ ಮುಖ್ಯ ಯೋಜನಾಧಿಕಾರಿ ಆಗಿರುವ ತಾಪಂ ಆಡಳಿತ ಅಧಿಕಾರಿ ಎಸ್.ಎಸ್. ಮಠಪತಿ ಅವರು ಹಾಜರಿದ್ದ ಸಿಬ್ಬಂದಿಗಳಿಗೆ ತಾಕೀತು ಮಾಡಿದರು.

ಪಟ್ಟಣದ ತಾಲೂಕು ಪಂಚಾಯತ್ ಕಚೇರಿಯಲ್ಲಿ ಈಚೆಗೆ ಕರೆದ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಭೆಯ ಮುಖ್ಯ ಉದ್ದೇಶ 10ನೇ ತರಗತಿಯ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಸುಧಾರಿಸುವದು ಮತ್ತು ಶಾಲಾ ಮೂಲ ಸೌಲಭ್ಯಗಳನ್ನು ಬೆಂಬಲಿಸುವದು. ಸಭೆಯ ಅಧ್ಯಕ್ಷತೆಯನ್ನು ವಹಿಸಿದ ಯೋಜನಾಧಿಕಾರಿಗಳು, "ವಿದ್ಯಾರ್ಥಿ ಗಳ ಶೈಕ್ಷಣಿಕ ಗುಣಮಟ್ಟವನ್ನು ಉತ್ತಮಗೊಳಿಸಲು ಅಧ್ಯಾಪಕರು ಮತ್ತು ಪಾಲಕರು ಒಂದಾಗಿ ಕೆಲಸ ಮಾಡಬೇಕು," ಎಂದು ಹೇಳಿಕೆ ನೀಡಿದರು.



ವಿದ್ಯಾರ್ಥಿಗಳಿಗೆ ಪಾಠಗಳನ್ನು ಸೃಜನಶೀಲ ಹಾಗೂ ಆಸಕ್ತಿದಾಯಕವಾಗಿ ಕಲಿಸಬೇಕಾಗಿದೆ. ನಿರ್ದಿಷ್ಟ ಪಠ್ಯಕ್ರಮವನ್ನು ನಿರ್ಧಿಷ್ಟ ಸಮಯದಲ್ಲಿ ಪೂರ್ಣಗೊಳ್ಳಲು ಕ್ರಮಗಳನ್ನು ಕೈಗೊಳ್ಳಬೇಕು. ವಿದ್ಯಾ ರ್ಥಿಗಳ ಸಕ್ರಿಯ ಭಾಗವಹಿಸುವಿಕೆ ಮತ್ತು ಗಮನ ಕೇಂದ್ರೀಕರಿಸಲು ಹೊಸ ಶೈಕ್ಷಣಿಕ ಕಾರ್ಯತಂತ್ರಗಳನ್ನು ಅಳವಡಿಸಬೇಕು. ಪರೀಕ್ಷಾ ತಯಾರಿಯನ್ನು ಸುಲಭಗೊಳಿಸಲು, ಅಧ್ಯಾಪಕರು ವಿಶೇಷ ತರಗತಿಗಳನ್ನು ಆಯೋಜಿಸಲು ಅವರು ಸೂಚನೆ ನೀಡಿದರು. ವಿದ್ಯಾರ್ಥಿಗಳ ಶಿಕ್ಷಣ ಗುಣಮಟ್ಟವನ್ನು ಉತ್ತಮಗೊಳಿಸಲು ಅಧ್ಯಾಪಕರು ಹಾಗೂ ಪಾಲಕರ ಸಕ್ರಿಯ ಭಾಗವಹಿಸುವಿಕೆ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ವಿದ್ಯಾರ್ಥಿಗಳಿಗೆ ಪಾಠಗಳನ್ನು ಸೃಜನಶೀಲ ರೀತಿಯಲ್ಲಿ ಕಲಿಸಬೇಕಾಗಿ, ನಿರ್ದಿಷ್ಟವಾದ ಸಮಯದೊಳಗೆ ಪಠ್ಯವನ್ನು ಮುಗಿಸುವಂತೆಯೂ ಸಲಹೆ ನೀಡಿದರು. ಶಾಲಾ ಆವರಣದ ಮೂಲ ಸೌಲ ಭ್ಯಗಳ ಮೇಲೂ ತಮ್ಮ ಗಮನ ಹರಿಸಬೇಕು. ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ ಹಾಗೂ ಸ್ವಚ್ಛತೆ ವಿಷಯದಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಹಾಜರಿದ್ದ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿ ಹಲವು ಸಮಸ್ಯೆಗಳು ಮತ್ತು ಸುಧಾರಣೆ ಸಲಹೆ ನೀಡಿದ ಅವರು, ಇದೇ ವೇಳೆ ಹಾಜರಿದ್ದ ಇನ್ನಿತರ ಇಲಾಖೆಯ ಪ್ರಗತಿ ಪರಿಶೀಲನೆಯನ್ನು ಕೈಗೊಂಡರು.

ಸಭೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ. ಹಳ್ಳದ, ತಾಪಂ ಯೋಜನಾಧಿಕಾರಿ ಶರಬಸವ ಶೀಲವಂತ, ಸಹಾಯಕ ಲೆಕ್ಕಾಧಿಕಾರಿ ಜಗದೀಶ ಕುಡಳ್ಳಿ, ಡಾ. ಯಲ್ಲಪ್ಪ ಇಂಗಳೆ, ಅಭಿವೃದ್ಧಿ ಅಧಿಕಾರಿ ನಾಗೇಶ ಮೂರ್ತಿ, ಶಿವಾನಂದ ಮಾನಿಂಗ, ರಾಮದಾಸ್ ಪೂಜಾರಿ ಸೇರಿದಂತೆ ಇನ್ನಿತರರು ಇದ್ದರು.

# ಬಳ್ಳಾರಿ ಜಿಲ್ಲಾ ನ್ಯಾಯಾಲಯದ ಬೆರಳಚ್ಚುಗಾರರ ನೇಮಕಾತಿ ರದ್ದು



* ಉಚ್ಚನ್ಯಾಯಾಲಯದ ಆದೇಶದಂತೆ
* ನೇಮಕ ಮಾಡಿದ ಜಿಲ್ಲಾ ನ್ಯಾಯಾಧೀಶರಿಂದಲೇ ರದ್ದು
* ಬೆರಳಚ್ಚು ನಕಲುಗಾರರ ಹುದ್ದೆಗಳೂ ರದ್ದು.
* ಕಳೆದ ಎರೆಡು ದಶಕಗಳ ನ್ಯಾಯಾಂಗ ಇತಿಹಾಸದಲ್ಲಿ ಈ ರೀತಿ ಆಗಿರಲಿಲ್ಲ
* ಅಕ್ರಮದ ದೂರುಗಳ ಹಿನ್ನಲೆ ರದ್ದು ಎಂಬ ಶಂಕೆ
* ನೇಮಕಾತಿ ಪ್ರಕ್ರಿಯೆ ತನಿಖೆಗೆ ಒತ್ತಾಯ

ಬಳ್ಳಾರಿ:–

ಇಲ್ಲಿನ ಜಿಲ್ಲಾ ನ್ಯಾಯಾಲಯದಲ್ಲಿ ನೇಮಕಾತಿ ಮಾಡಿದ್ದ ಬೆಳಚ್ಚುಗಾರರು ಮತ್ತು ಬೆರಳಚ್ಚು ನಕಲುಗಾರರ ಹುದ್ದೆಗಳ ನೇಮಕಾತಿಯನ್ನು. ನೇಮಕ ಮಾಡಿದ್ದ ಜಿಲ್ಲಾ ನ್ಯಾಯಾಧೀಶೆ ಎಸ್.ಹೆಚ್.ಪುಷ್ಪಾಂಜಲಿ ದೇವಿಯವರು ನಿನ್ನೆ ರದ್ದು ಮಾಡಿದ ಆದೇಶ ಹೊರಡಿಸಿದ್ದಾರೆ. ಅವರು ಆದೇಶದಲ್ಲಿ ಉಚ್ಚನ್ಯಾಯಾಲಯದ ಸೂಚನೆಯಂತೆ ರದ್ದು ಮಾಡಿದೆ ಎಂದು ನೇಮಕಾತಿ ಪ್ರಕ್ರಿಯೆಯ ದಿನಾಂಕಗಳ ಸಮೇತ ವಿವರಿಸಿದ್ದಾರೆ. ಕಳೆದ ತಿಂಗಳು ನೇಮಕಾತಿಗೆ ಸಂದರ್ಶನ ನಡೆದಿತ್ತು. ಅರ್ಹವಾದವರಿಗೆ ಹುದ್ದೆ ಸಿಗದೆ, ಅನರ್ಹರಿಗೆ ಕೆಲವರು ಶಿಫಾರಸ್ಸು ಮಾಡಿದವರಿಗೆ ಹುದ್ದೆ ನೀಡಿದೆ–ಂದು ಅರ್ಹ ಅಭ್ಯರ್ಥಿಗಳು ಉಚ್ಚನ್ಯಾಯಾಲಯಕ್ಕೆ ದೂರು ನೀಡಿದ ಹಿನ್ನಲೆಯಲ್ಲಿ. ಆ ನ್ಯಾಯಾಲಯ ನೇಮಕಾತಿ ರದ್ದಿಗೆ ಸೂಚನೆ ನೀಡಿದೆಯಂತೆ. ಈ ರೀತಿ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ನೇಮಕಾತಿಗಳು ರದ್ದಾಗಿರುವ ಇತಿಹಾಸ ಕಳೆದ ಎರೆಡು ದಶಕಗಳಿಂದ ನಡೆದಿಲ್ಲವಂತೆ. ನೇಮಕಾತಿ ಮಾಡಿದ್ದ ಜಿಲ್ಲಾ ನ್ಯಾಯಾಧೀಶರು ನಾಳೆ ನಿವೃತ್ತಿಯಾಗುತ್ತಿದ್ದು. ಇಂತಹ ಸಂದರ್ಭದಲ್ಲಿ ಅವರು ಮಾಡಿದ ನೇಮಕಾತಿಯ ಆದೇಶವನ್ನು ಅವರೇ ರದ್ದು ಪಡಿಸಿದ್ದು ಖೇದಕರ ಸಂಗತಿ.

**ಅಕ್ರಮದ ವಾಸನೆ:** ಈ ನೇಮಕಾತಿಯಲ್ಲಿ ಕಾಣದ ವ್ಯಕ್ತಿಗಳ ಕೈವಾಡದಿಂದ ಅಕ್ರಮ ನಡೆದಿದೆಂಬ ಮಾತುಗಳು ಕೇಳಿ ಬರುತ್ತಿವೆ. ಕೋತಿ ತಾನು ತಿಂದು ಮೇಕೆ ಮೂತಿಗೆ ಒರಿಸಿದಂತೆ ಎಂಬ ಗಾದೆ ಮಾತಿನಂತೆ. ಹುದ್ದೆಗಳ ನೇಮಕಾತಿಗೆ ಪ್ರಭಾವಿ ವ್ಯಕಿಗಳು ಅಭ್ಯರ್ಥಿಗಳಿಂದ ಪ್ರತಿಫಲ ಪಡೆದು ನ್ಯಾಯಾಧೀಶರ ಮೇಲೆ ಪ್ರಭಾವ ಬೀರಿ ಅಕ್ರಮ ನಡೆಯಲು ಕಾರಣ ಎನ್ನಲಾಗುತ್ತಿದೆ. ಅಕ್ರಮದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ ದೂರುಗಳ ಹಿನ್ನಲೆಯಲ್ಲಿ ಜಿಲ್ಲಾ ನ್ಯಾಯಾಲಯ ಮಾಡಿದ ನೇಮಕಾತಿ ಆದೇಶಗಳನ್ನು ರದ್ದು ಮಾಡಿದೆ. ಇದರಿಂದಾಗಿ ತಾವು ಪ್ರಾಮಾಣಿಕರು ಅಂತ ಬೆನ್ನು ತಟ್ಟಿಕೊಂಡವರ ಮುಖವಾಡ ಕಳಚಿಬಿದ್ದಂತಾಗಿದೆ. ಈ ಅಕ್ರಮ ನೇಮಕಾತಿ ಬಗ್ಗೆ ತನಿಖೆ ನಡೆಸಿದರೆ. ಪಾಲುದಾರರ ಮುಖವಾಡಗಳು ಬಯಲಿಗೆ ಬರುತ್ತವೆ. ಬಿ.ರವೀಂದ್ರನಾಥ, ಕಾರ್ಯದರ್ಶಿಗಳು, ಬಳ್ಳಾರಿ ವಕೀಲರ ಸಂಘ.

# ಜೀವನದ ಯಶಸ್ಸಿಗೆ ಕಾಮನ್ ಸೆನ್ಸ್ ಅಗತ್ಯ: ಡಾ. ಉಮೇಶ್ ಜಾಧವ್

ಕಲಬುರಗಿ:–

ವ್ಯಕ್ತಿಯ ಜೀವನದಲ್ಲಿ ಕಾಮನ್ ಸೆನ್ಸ್ ಅಥವಾ ಸಾಮಾನ್ಯ ಜ್ಞಾನವನ್ನು ಬಳಸಿದಾಗ ಮಾತ್ರ ಯಶಸ್ಸು ಹೊಂದಲು ಸಾಧ್ಯ ಎಂದು ಮಾಜಿ ಲೋಕಸಭಾ ಸದಸ್ಯರಾದ ಡಾ. ಉಮೇಶ್ ಜಾಧವ್ ಹೇಳಿದರು.

ಕಲ್ಬುರ್ಗಿ ಹಿಂದಿ ಪ್ರಚಾರ ಸಭಾದಲ್ಲಿ ಇತ್ತಿಚೆಗೆ ಬನ್ನಪ್ಪ ಬಿ.ಕೆ ಅವರ " ಕಾಮನ್ ಸೆನ್ಸ್ " ಕೃತಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿ ಕಾಮನ್ ಸೆನ್ಸ್ ಎಂಬುದು ಕೇವಲ ಸುಶಿಕ್ಷಿತರಲ್ಲಿ ಮಾತ್ರ ಇರದೆ ಸಾಮಾನ್ಯ ಹಳ್ಳಿಗಾಡಿನ ಜನರಲ್ಲಿ ಹೆಚ್ಚಾಗಿ ಕಾಣಲು ಸಾಧ್ಯ. ಹಳ್ಳಿಗರು ಜನರೊಡನೆ ತೋರುವ ದಯೆ, ಕರುಣೆ ಎಲ್ಲವೂ ಶಿಕ್ಷಣದಿಂದ ಲಭ್ಯವಾಗುವುದಿಲ್ಲ. ಅದು ಬದುಕಿನಿಂದ ಕಲಿತ ವಿದ್ಯೆಯಾಗಿದೆ. ಇದರಿಂದಾಗಿ ಪಟ್ಟಣವಾಸಿಗಳಿಗಿಂತಲೂ ಹಳ್ಳಿಗಳಲ್ಲಿ ನೋವು ,ಧೈರ್ಯ ತುಂಬುವ ಕಾಮನ್ ಸೆನ್ಸ್ ಹೆಚ್ಚಿಗಿದೆ ಎಂದು ಹೇಳಿದರು. ರಾಜಕೀಯದಲ್ಲಿ ಧರ್ಮಸಿಂಗ್ ಅವರಲ್ಲಿ ಕಾಮನ್ ಸೆನ್ಸ್ ಅತಿಯಾಗಿರುವುದನ್ನು ನಾನು ಕಂಡಿದ್ದೇನೆ. ಆ ಕಾರಣ–ಕ್ಕಾಗಿ ಅವರು ಮುಖ್ಯಮಂತ್ರಿಯಾದರು. ಕಾಮನ್ ಸೆನ್ಸ್ ಅನ್ನು ಬಳಸಿ ಬದುಕನ್ನು



ಉತ್ತಮಗೊಳಿಸಬೇಕು. ಅದಕ್ಕಾಗಿ ಬನ್ನಪ್ಪ ಅವರು ಬರೆದ ಈ ಕೃತಿ ಎಲ್ಲರಿಗೂ ಪ್ರೇರಣೆ–ಯಾಗಲಿ ಎಂದು ಶುಭ ಕೋರಿದರು.

ವಿಧಾನ ಪರಿಷತ್ ಸದಸ್ಯರಾದ ಶಶಿಲ್ ಜಿ ನಮೋಶಿಯವರು ಮಾತನಾಡಿ ಕೃತಕ ಬುದ್ಧಿಮತ್ತೆಯ ಈ ಕಾಲದಲ್ಲಿ ಸಾಮಾನ್ಯ ಜ್ಞಾನ ಎಲ್ಲರಿಗೂ ಅತ್ಯಂತ ಅನುಕೂಲವಾಗಿರಕ್ಕಂತದ್ದು ಮತ್ತು ಅದನ್ನು ಹೆಚ್ಚಾಗಿ ಬಳಸಿ ಜೀವನ ಸಾರ್ಥಕ ಮಾಡಿಕೊಳ್ಳಬೇಕಾಗಿದೆ ಎಂದರು. ಕೃತಿಯ ಲೇಖಕರಾದ ಬನ್ನಪ್ಪ ಬಿ.ಕೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕಾಮನ್ ಸೆನ್ಸ್ ಕುರಿತಾಗಿ ಇಂಗ್ಲಿಷ್ ಕೃತಿಗಳನ್ನು ಓದಿದ ನಂತರ ಕನ್ನಡದಲ್ಲಿ ಕೃತಿ ಬರೆಯಲು ಪ್ರೇರಣೆ ದೊರಕಿದೆಯಲ್ಲದೆ ಆಂಗ್ಲ ಭಾಷೆಯ ಪುಸ್ತಕಗಳಿಗಿಂತಲೂ ಹೆಚ್ಚು ಅರ್ಥಪೂರ್ಣವಾಗಿ ಕನ್ನಡದಲ್ಲಿ ಕಾಮನ್ ಸೆನ್ಸ್ ನ ಕುರಿತಾಗಿ ಬರೆಯಲು ಸಾಧ್ಯವಾಯಿತು. ಪ್ರತಿಯೊಬ್ಬರಲ್ಲೂ ಕಾಮನ್ ಸೆನ್ಸ್ ಇದ್ದರೂ ಕೂಡ ಅದನ್ನು ಸೂಕ್ತ ಕಾಲದಲ್ಲಿ ಬಳಸದೆ ಇರುವುದರಿಂದ ದೊಡ್ಡ ಹಡಗು ಸಣ್ಣ ರಂಧ್ರವೊಂದರಿಂದಾಗಿ ನೀರು ನುಗ್ಗಿ ಮುಳುಗುವಂತೆ ಜೀವನ ಹಾಳಾಗುತ್ತಿದೆ. ಜೀವನದಲ್ಲಿ ಕೈಗೊಳ್ಳುವ ಪ್ರತಿ ನಿರ್ಧಾರ ಬಹಳ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಡಾ. ಅವಿನಾಶ್ ಜಾಧವ್, ಹಿಂದುಳಿದ ವರ್ಗಗಳ ಮೋರ್ಚಾದ ಕಾರ್ಯದರ್ಶಿ ಅಯ್ಯಣ್ಣ ಮ್ಯಾಕೇರಿ, ಕಾಡಾ ಮಾಜಿ ಅಧ್ಯಕ್ಷರಾದ ಶರಣಪ್ಪ ತಳವಾರ್, ಸೋಮನಾಥ ಪಾಟೀಲ್ ಬೀದರ್, ನಿವೃತ್ತ ಪ್ರಾಂಶುಪಾಲರಾದ ಕಾಶೀನಾಥ ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಓಂ ಪ್ರಕಾಶ್ ಪಾಟೀಲ್ ಸ್ವಾಗತಿಸಿ ಆನಂದ ಸಿದ್ದಾಮಣಿ ಧನ್ಯವಾದವಿತ್ತರು.

ಈ ಕಾರ್ಯಕ್ರಮದಲ್ಲಿ ಸೂರ್ಯಕಾಂತ ಸೊನ್ನದ,ಸಿದ್ದಪ್ಪ ತಳ್ಳಳ್ಳಿ ಪ್ರಭಾಕರ್ ಜೋಶಿ, ಡಾ. ಸದಾನಂದ ಪೆರ್ಲ ,ವೀರೇಂದ್ರ ರಾಯ್ ಕೋಡ್, ಡಾ. ಸುಧಾ ಹಾಲ ಕಾಯಿ, ಡಾ. ನಾಮದೇವ ರಾಥೋಡ್, ಡಾ. ಬಿ ಆರ್ ಅಣ್ಣಸಾಗರ್, ಡಾ. ಶ್ರೀಶೈಲ ಬಿರಾದರ್, ಡಾ. ವೀರಶೆಟ್ಟಿ ಗಾರಂಪಳ್ಳಿ ಮತ್ತಿತರರು ಉಪಸ್ಥಿತರಿದ್ದರು. ಲೋಕಸಭಾ ಚುನಾವಣೆ ಮುಗಿದು ಜನರ ತೀರ್ಪು ಪ್ರಕಟವಾಗಿದ್ದು ಕೆಲವೇ ಮತಗಳ ಅಂತರದಿಂದ ಸೋತಿ–ದ್ದರೂ 6 ಲಕ್ಷ 25ಸಾವಿರ ಮತಗಳನ್ನು ಹಾಕಿದ ಮತದಾರರಿಗೆ ನ್ಯಾಯ ಕೊಡಲು ದಿನದ 24 ಗಂಟೆಯೂ ಲಭ್ಯವಿರುತ್ತೇನೆ. ಕಾಮನ್ ಸೆನ್ಸ್ ಕೃತಿ ಲೋಕಾರ್ಪಣೆಯ ಮೂಲಕ ನನ್ನ ರಾಜಕೀಯ ಜೀವನದ ಮತ್ತೊಂದು ಅಧ್ಯಾಯವನ್ನು ಪ್ರಾರಂಭಿಸಿ ಜನರ ಜೊತೆ ಸದಾ ಸೇವೆಗೆ ಬದ್ಧನಾಗಿರುತ್ತೇನೆ. ನಿಮ್ಮ ಸೋಲು ನಿಜವಾಗಿ ಅದು ಸೋಲಲ್ಲ ಎಂದು ಮತದಾರರು ಅಭಿಮಾನಿಗಳು ಸಾಂತ್ವನ ಹೇಳುತ್ತಿದ್ದು ಜನ ಪ್ರೀತಿಗೆ ನಾನು ಶಿರಬಾಗುತ್ತೇನೆ ಎಂದು ಡಾ. ಉಮೇಶ್ ಜಾಧವ್ ಹೇಳಿದರು.

# ಹೀಗೊಂದು ಕನಸಿನ ದರ್ಶನ... ದರ್ಶನ್ ಮತ್ತು ಅಂಗುಲಿಮಾಲ...

ಈ ಸಮಾಜದಲ್ಲಿ ಒಳ್ಳೆಯದಕ್ಕೆ ಮತ್ತು ಪರಿವರ್ತನೆಗೆ ಅವಕಾಶವಿದೆ ಎಂಬುದನ್ನು ಅಭಿಮಾನಿಗಳಿಗೆ ನೆನಪಿಸಲು.

ಅಂಗುಲಿಮಾಲ ಎಂಬ ಹಿಂಸಾ ಪ್ರವೃತ್ತಿಯ ದರೋಡೆಕೋರ ಬುದ್ದನ ಪ್ರಭಾವಕ್ಕೊಳಗಾಗಿ ಬದಲಾದ ವಿಷಯವನ್ನು ಜ್ಞಾಪಿಸುತ್ತಾ..

ಈ ಹೊತ್ತಿನ ಕನ್ನಡದ ಸೂಪರ್ ಸ್ಟಾರ್ ಅಥವಾ ಬಾಕ್ಸ್ ಆಫೀಸ್ ಸುಲ್ತಾನ್ ಎಂದು ಹೆಸರಾಗಿರುವುದು ನಟ ದರ್ಶನ್. ಅಪಾರ ಅಭಿಮಾನಿಗಳನ್ನು ಹೊಂದಿ ಕಮರ್ಷಿಯಲ್ ದೃಷ್ಟಿಯಿಂದ ಸದ್ಯ ಕನ್ನಡದ ಮೊದಲನೆಯ ಸಾಲಿನ ಸೂಪರ್ ಸ್ಟಾರ್ ನಟ. ಆ ಸಾಧನೆ ಕಡಿಮೆ ಏನು ಅಲ್ಲ. ಅದರಲ್ಲೂ ಸಿನಿಮಾದ ಕ್ರೇಜ್ ತುಂಬಾ ಆಳ ಮತ್ತು ಹುಚ್ಚುತನವಾಗಿರುವಾಗ ಮತ್ತು ಬೇರೆ ಎಲ್ಲ ಕ್ಷೇತ್ರಗಳ ಅಭಿಮಾನಕ್ಕೆ ಒಂದು ಮಿತಿ ಇದ್ದರೆ ಈ ಸಿನಿಮಾ ನಟರ ಅಭಿಮಾನಕ್ಕೆ ಮಿತಿಯೇ ಇರುವುದಿಲ್ಲ ಅಥವಾ ಅತಿರೇಕ ವಾಗಿರುತ್ತದೆ. ಪ್ರಾಣ ಬಿಡಲು ಹಿಂಜರಿಯುವುದಿಲ್ಲ......

ಈ ರೀತಿಯ ದರ್ಶನ್ ಎಂಬ ವ್ಯಕ್ತಿ ಈಗ ಒಂದು ಕೊಲೆ ಆಪಾದನೆಯ ಮೇಲೆ ಜೈಲು ಸೇರಿದ್ದಾರೆ. ಈಗಿನ ಸುದ್ದಿ ಮಾಧ್ಯಮಗಳ ವರದಿಯ ಪ್ರಕಾರ ಆತ ಬಹುತೇಕ ಕೊಲೆಯಲ್ಲಿ ನೇರವಾಗಿ ಭಾಗಿಯಾಗಿರುವ ಆರೋಪ ಮತ್ತು ಶಿಕ್ಷಿಸಲು ನ್ಯಾಯಾಲಯಕ್ಕೆ ಬೇಕಾದಷ್ಟು ಸಾಕ್ಷಿಗಳು ದೊರೆತಿವೆ ಎಂದು ಹೇಳಲಾಗುತ್ತದೆ. ಸದ್ಯಕ್ಕಂತೂ ಆತ ಜಾಮೀನಿನ ಮೇಲೆ ಬಿಡುಗಡೆಯಾಗಲು ಸಾಕಷ್ಟು ಸಮಯ ಬೇಕಾಗಬಹುದು. ಮುಂದೆ ಕೇಸ್ ಯಾವ ರೀತಿಯ ತಿರುವನ್ನು ಬೇಕಾದರೂ ಪಡೆಯಬಹುದು.

ಹಾಗೆಂದು ದರ್ಶನ್ ಅವರ ಬದುಕು ಮುಗಿದೇ ಹೋಯಿತು ಎಂಬ ಪ್ರಶ್ನೆ ಹಲವರನ್ನು ಕಾಡಬಹುದು. ತಾಂತ್ರಿಕವಾಗಿ ಮತ್ತು ಭಾವನಾತ್ಮಕವಾಗಿ ಅವರು ಮೊದಲಿನ ಸ್ಥಾನಮಾನ ಗಳಿಸುವುದು ಕಷ್ಟ. ಸುಮಾರು 47 ವರ್ಷ ವಯಸ್ಸಿನ ಅವರು ಈ ಘಟನೆಯಿಂದ ಮತ್ತು ಈ ಕೇಸಿನಿಂದ ಹೊರಬರುವಷ್ಟರಲ್ಲಿ ಸಾಕಷ್ಟು ಹಣ್ಣುಗಾಯಿ ನೀರುಗಾಯಿ ಆಗಿರುತ್ತಾರೆ. ಅವರು ಮತ್ತೆ ತಮ್ಮ ಇಮೇಜ್ ಪಡೆದುಕೊಳ್ಳಲು ಸ್ವಲ್ಪ ಅವಕಾಶಗಳು ಸಿಗಬಹುದು. ಆದರೆ ಅವರ ಸುತ್ತಲಿನ ಜನ, ಸಲಹೆಗಾರರು, ಹಿತೈಷಿಗಳು, ಕುಟುಂಬಸ್ಥರು ಇದನ್ನು ಮಾನವೀಯತೆಯ ಹಿನ್ನೆಲೆಯಲ್ಲಿ ಮತ್ತು ವಿಶಾಲವಾದ ಅರ್ಥದಲ್ಲಿ ಗ್ರಹಿಸಿ ದರ್ಶನ್ ಅವರಿಗೆ ಸಲಹೆ ನೀಡಬೇಕಾಗುತ್ತದೆ ಅಥವಾ ದರ್ಶನ್ ಅವರೇ ತಮ್ಮೊಳಗೆ ಒಂದು ಕ್ರಾಂತಿ-ಕಾರಿ ಬದಲಾವಣೆಗಾಗಿ ಅಂತಹದೇ ದಿಟ್ಟ ನಿರ್ಧಾರ ಮಾಡಬೇಕಾಗುತ್ತದೆ......

**ಮೊದಲಿಗೆ,**

ಚಾರ್ಜ್ ಶೀಟ್ ( ಆರೋಪಪಟ್ಟಿ ) ನ್ಯಾಯಾಲಯಕ್ಕೆ ಸಲ್ಲಿಕೆ ಆಗುತ್ತಿದ್ದಂತೆ ದರ್ಶನ್ ಅವರು ರೇಣುಕಾ ಸ್ವಾಮಿ ಎಂಬ ವ್ಯಕ್ತಿ ನನ್ನ ಅಭಿಮಾನಿ, ಆತನ ಕೊಲೆಯಾಗಿದೆ. ಆದ್ದರಿಂದ ಆತನ ಹೆಂಡತಿಗೆ ಒಂದಷ್ಟು ಪರಿಹಾರ ಮತ್ತು ಆಕೆ ಗರ್ಭಿಣಿಯಾಗಿರುವುದರಿಂದ ಆಕೆಗೆ ಹುಟ್ಟುವ ಮಗುವಿನ ವಿದ್ಯಾಭ್ಯಾಸದವರೆಗಿನ ಸಂಪೂರ್ಣ ಖರ್ಚು ವೆಚ್ಚಗಳನ್ನು ನಾನು ನೋಡಿಕೊಳ್ಳುತ್ತೇನೆ ಎಂದು ಬಹಿರಂಗವಾಗಿ ಹೇಳಿ ಅವರಿಗೆ ಸುಮಾರು ಒಂದು ಕೋಟಿ ಯವರೆಗೆ ನೇರ ಸಹಾಯ ಅಥವಾ ಅಭಿಮಾನಿಗಳ ಮೂಲಕ ಮಾಡುವುದು......

**ಎರಡನೆಯದಾಗಿ,**

ಬಹುಶಃ ಕನಿಷ್ಠ ಆರು ತಿಂಗಳಿಂದ ಒಂದು ವರ್ಷದವರೆಗೂ ಅವರಿಗೆ ಜಾಮೀನು ಸಿಗುವ ಸಾಧ್ಯತೆ ಕಡಿಮೆ. ಈ ಅವಧಿಯಲ್ಲಿ ಅವರು ಚಿತ್ರರಂಗದ ಪ್ರತಿಭಾವಂತ ನಿರ್ದೇಶಕರನ್ನು, ಕಥೆಗಾರರನ್ನು, ನಿರ್ಮಾಪಕರನ್ನು ತಮ್ಮ ಸಹಾಯಕರ ಮೂಲಕ ಸಂಪರ್ಕಿಸಿ, ನಾನು ಜಾಮೀನಿನ ಮೇಲೆ ಬಿಡುಗಡೆಯಾದ ನಂತರ ನನಗಾಗಿ ನಾಲ್ಕಾರು ಅತ್ಯುತ್ತಮ ಕಥೆಗಳನ್ನು ಸಿದ್ಧ ಮಾಡಿ. ನಾನು ಕಡಿಮೆ ಸಂಭಾವನೆಗೆ ಆ ಚಿತ್ರಗಳಲ್ಲಿ ನಟಿಸುತ್ತೇನೆ. ಜನರಿಗೆ ಮತ್ತೊಮ್ಮೆ ಒಳ್ಳೆಯ ಸಂದೇಶದ ಚಿತ್ರಗಳನ್ನು ನೀಡುವ ಮುಖಾಂತರ ಅಭಿಮಾನಿಗಳಲ್ಲಿ ಮತ್ತೆ ಪ್ರೀತಿಯ ಮನರಂಜನೆ ನೀಡಬೇಕಿದೆ ಎಂದು ಚಿತ್ರಕಥೆಯನ್ನು ಸಿದ್ಧ ಮಾಡಿ ಟ್ಟುಕೊಳ್ಳಬೇಕು......

**ಮೂರನೆಯದಾಗಿ,**

ತನ್ನ ಪತ್ನಿ ಮತ್ತು ಪ್ರೇಯಸಿಯ ಸಂಬಂಧಗಳನ್ನು ಯಥಾಸ್ಥಿತಿ ಈಗಿನಂತೆಯೇ ಮುಂದುವರಿಸಿ ಇಬ್ಬರ ನಡುವೆ ಸೌಹಾರ್ದಯುತ ಸಮನ್ವಯ ಸಾಧಿಸಿ ಅತ್ಯುತ್ತಮ ಕುಟುಂಬದ ಮುಖ್ಯಸ್ಥನಂತೆ ವರ್ತಿಸಬೇಕು......

**ನಾಲ್ಕನೆಯದಾಗಿ,**

ಕನ್ನಡ ಭಾಷೆ, ಕನ್ನಡ ಜಲ ಮತ್ತು ಕನ್ನಡ ಚಿತ್ರರಂಗ-ಕ್ಕೆ ಎಷ್ಟು ಸಾಧ್ಯವೊ ಅಷ್ಟು ಸಹಾಯವನ್ನು, ಹೋರಾಟವನ್ನು ಮಾಡಬೇಕಾಗುತ್ತದೆ. ಹಿಂದಿನ ತನ್ನ ವರ್ತನೆ ಮರೆಯಾಗುವಷ್ಟು ತೀವ್ರವಾಗಿ ಪ್ರೀತಿಯಿಂದ ಆ ಜವಾಬ್ದಾರಿಯನ್ನು ನಿರ್ವಹಿಸಬೇಕಾಗುತ್ತದೆ. ಅದಕ್ಕಾಗಿ ತನು ಮನ ಧನಗಳ ತ್ಯಾಗದ ಅವಶ್ಯಕತೆ ಇದೆ. ಅದಕ್ಕೆ ಅವರು ಮಾನಸಿಕವಾಗಿ ಸಿದ್ದರಾಗಬೇಕು........

**ಐದನೆಯದಾಗಿ,**

ಈಗ ರೇಣುಕಾ ಸ್ವಾಮಿ ಹತ್ಯೆಯ ಆರೋಪದಲ್ಲಿ ಜೈಲಿನಲ್ಲಿರುವ ಎಲ್ಲಾ 17 ಆರೋಪಿಗಳಿಗೂ ದರ್ಶನ್ ಅವರೇ ಖುದ್ದು ವಕೀಲರನ್ನು ನೇಮಿಸಿ ಅವರ ಕೇಸು ನಡೆಸಬೇಕು ಮತ್ತು ಅವರ ಕುಟುಂಬದವರಿಗೆ ಸಾಧ್ಯವಾದಷ್ಟು ಹಣಕಾಸಿನ ಸಹಾಯವನ್ನು ನೀಡಬೇಕು. ಹೀಗೆ ಮಾಡುವುದರಿಂದ ಅವರ ಮೇಲಿನ ಅಭಿಮಾನ ಹೆಚ್ಚಾಗುತ್ತದೆ ಮತ್ತು ಕೇಸಿನಲ್ಲಿ ಅವರಿಗೆ ಅನುಕೂಲವೂ ಆಗಬಹುದು......

**ಆರನೆಯದಾಗಿ ಮತ್ತು ಬಹುಮುಖ್ಯವಾಗಿ,**

ತಮ್ಮ ಕುಡಿತದ ಚಟವನ್ನು ಸಾಧ್ಯವಾದಷ್ಟು ಕಡಿಮೆ ಮಾಡಿಕೊಳ್ಳಬೇಕು ಅಥವಾ ರಾತ್ರಿ ಮಲಗುವಾಗ ಮಾತ್ರ ಎಂಬ ಶಿಸ್ತಿಗೆ ಸೀಮಿತಗೊಳಿಸಿಕೊಳ್ಳಬೇಕು ಅಥವಾ ಸಂಪೂರ್ಣ ತ್ಯಜಿಸಬೇಕು. ಜೊತೆಗೆ ಚಿತ್ರರಂಗದ ಸಾಮಾನ್ಯ ಪಾರ್ಟಿಗಳನ್ನು ಬಹಿಷ್ಕರಿಸಬೇಕು ಮತ್ತು ತಾನು ಆಯೋಜಿಸಬಾರದು. ಇತರರು ಆಯೋಜಿಸಿದ ಪಾರ್ಟಿಗಳಿಗೂ ಹೋಗಬಾರದು........

**ಏಳನೆಯದಾಗಿ,**

ಈಗ ತಾನು ಆರೋಪಿ ಸ್ಥಾನದಲ್ಲಿ ಜೈಲಿನಲ್ಲಿ ಇರುವಾಗ ತನ್ನ ವಿರುದ್ಧ ಮಾತನಾಡಿದವರ ಅಥವಾ ತನ್ನ ಪರವಾಗಿ ನಿಂತವರ ಯಾವ ಮುಲಾಜಿಗೂ ಒಳಗಾಗದೆ ಅದೆಲ್ಲವೂ ಸಾಮಾನ್ಯ ಪ್ರತಿಕ್ರಿಯೆಗಳು ಎಂದು ನಿರ್ಲಕ್ಷಿಸಿ, ಯಾರನ್ನೂ ವಿರೋಧಿ ಎಂದು ಪರಿಗಣಿಸದೆ ತಾನಾಯಿತು ತನ್ನ ಉದ್ಯೋಗವಾಯಿತು ಎಂಬಂತೆ ತಟಸ್ಥ ನೀತಿ ಅನುಸರಿಸಿದರೆ ದರ್ಶನ್ ಅವರ ವ್ಯಕ್ತಿತ್ವ ಸ್ವಲ್ಪ ವರ್ಷಗಳ ನಂತರ ಮತ್ತೊಮ್ಮೆ ಪ್ರಜ್ವಲಿಸುವ ಎಲ್ಲ ಸಾಧ್ಯತೆಯೂ ಇರುತ್ತದೆ.......

**ಎಂಟನೆಯದಾಗಿ,**

ಈಗಿನ ಘಟನೆಗಳು ಅನೇಕ ಸಂಬಂಧಗಳನ್ನು ಮುರಿದು ಹಾಕಬಹುದು ಅಥವಾ ಹೊಸ ಸಂಬಂಧಗಳು ಸ್ಥಾಪಿತವಾಗಬಹುದು ಅಥವಾ ಶತ್ರುಗಳು ಮಿತ್ರರಾಗಿ ಮಿತ್ರರು ಶತ್ರುಗಳೂ ಆಗಬಹುದು. ಈ ಎಲ್ಲಾ ಸಾಧ್ಯತೆಗಳು ಇರುತ್ತದೆ. ಅದನ್ನು ಅತ್ಯಂತ ಪ್ರಬುದ್ಧವಾಗಿ, ಸ್ಥಿತಪ್ರಜ್ಞತೆಯಿಂದ ಸ್ವೀಕರಿಸಿ, ತನ್ನ ವೃತ್ತಿಯ ಬಗ್ಗೆ ಮಾತ್ರ ಹೆಚ್ಚು ಗಮನ ಕೇಂದ್ರೀಕರಿಸಿ, ಉಳಿದಂತೆ ದೇಹ ಮತ್ತು ಮನಸ್ಸಿನ ಮೇಲೆ ನಿಯಂತ್ರಣ ಹೊಂದಿ ಹೊಸ ವ್ಯಕ್ತಿತ್ವ ಬೆಳೆಸಿಕೊಳ್ಳಲು ಪ್ರಯತ್ನಿಸಿದರೆ ಖಂಡಿತವಾಗಲೂ ದರ್ಶನ್ ಅವರ ಬದುಕಿನಲ್ಲಿ ಹೊಸ ಅಧ್ಯಾಯ ಪ್ರಾರಂಭವಾಗಬಹುದು.....

ಈಗಿನ ಸಂದರ್ಭದಲ್ಲಿ ಅದು ಅಷ್ಟು ಸುಲಭವಲ್ಲ. ಸಮಾಜವು ಅದನ್ನು ಅಷ್ಟು ಸುಲಭವಾಗಿ ಸ್ವೀಕರಿಸುವುದೂ ಇಲ್ಲ. ಮಾಧ್ಯಮಗಳು ತಮ್ಮ ಕಠಿಣ ನಿಲುವುಗಳಿಂದ ಉದ್ರೇಕಕಾರಿ ವಿಷಯಗಳನ್ನೇ ಪ್ರಸಾರ ಮಾಡುತ್ತವೆ. ಎಲ್ಲವನ್ನು ಮೀರುವ ಮಾನಸಿಕ ಸ್ಥಿತಿಗೆ ಹೋಗುವ ಒಂದು ಸುವರ್ಣ ಅವಕಾಶ ಈಗ ಜೈಲಿನಲ್ಲಿರುವ ದರ್ಶನ್ ಗೆ ಇದೆ. ಈ ಎಲ್ಲವೂ ಒಂದು ಸಾಧ್ಯತೆಗಳು ಮಾತ್ರ. ಆ ವ್ಯಕ್ತಿ ಈ ಘಟನೆಯಿಂದ ಕಲಿಯಬಹುದಾದ ಕೆಲವು ಒಳ್ಳೆಯ ಪಾಠಗಳು. ಇದನ್ನು ಮೀರಿ ಅವರಿಗೆ ತಮ್ಮ ಬದುಕನ್ನು ತಾವೇ ಪುನರ್ ಸ್ಥಾಪಿಸಿಕೊಳ್ಳುವ ಸ್ವಾತಂತ್ರ್ಯವೂ, ಬುದ್ಧಿಶಕ್ತಿಯೂ ಇರುತ್ತದೆ. ಆದರೆ ದಿಕ್ಕು ಮಾತ್ರ ಮಾನವೀಯವಾಗಿರಲಿ ಪ್ರಗತಿಪರವಾಗಿರಲಿ, ನೈತಿಕವಾಗಿರಲಿ ಎಂದು ನಾವು ಆಶಿಸಬಹುದಷ್ಟೇ.......

ಏಕೆಂದರೆ ಅಂತಹ ಒಬ್ಬ ಸೂಪರ್ ಸ್ಟಾರ್ ನಟ ಸದ್ಯಕ್ಕೆ ವಿಲನ್ ಆರುವಾಗ ಮತ್ತೊಮ್ಮೆ ಜನರ ಮನಸ್ಸಿನಲ್ಲಿ ನಾಯಕ ಆಗಬೇಕೆಂದರೆ ಈ ರೀತಿಯ ದಿಟ್ಟ, ತ್ಯಾಗ, ಕರುಣೆ, ಕ್ಷಮಾಗುಣದ ನಿರ್ಧಾರಗಳ ಅವಶ್ಯಕತೆ ಇರುತ್ತದೆ ಎಂಬುದು ನಮ್ಮ ಭಾವನೆ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,

**-ವಿವೇಕಾನಂದ.ಎಚ್.ಕೆ.**
9844013068.........

# ಸಿಎಂ.ರಾಜೀನಾಮೆಗೆ ಆಗ್ರಹಿಸಿ ಹೊಸಪೇಟೆ ಡಿಸಿ ಕಛೇರಿಗೆ ಬಿಜೆಪಿ ಮುತ್ತಿಗೆ ಯತ್ನ

ಹೊಸಪೇಟೆ:-

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ 187ಕೋಟಿ ಅವ್ಯವಹಾರದ ಜೊತೆ ಕೇಂದ್ರ ಪುರಸ್ಕೃತ ಯೋಜನೆಯ ಅನುದಾನ 83ಕೋಟಿ ಅವ್ಯವಹಾರಕ್ಕೆ ಸಂಬಂದಿಸಿದಂತೆ ಮುಖ್ಯಮಂತ್ರಿಗಳು ರಾಜಿನಾಮೆ ನೀಡುವಂತೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಇಂದು ಜಿಲ್ಲಾಧಿಕಾರಿಗಳ ಕಛೇರಿ ಮುತ್ತಿಗೆಗೆ ಯತ್ನಿಸಿದರು.



ಹೊಸಪೇಟೆಯ ಸಾಯಿ ಬಾಬಾ ವೃತ್ತದಿಂದ ಆರಂಭವಾದ ಮೆರವಣಿಗೆ ಜಿಲ್ಲಾಧಿಕಾರಿಗಳ ಕಛೇರಿದೆ ಬಂದ ನಂತರ ನಡೆದ ಪ್ರತಿಭಟನಾ ಸಭೆಯಲ್ಲಿ ಜಿಲ್ಲಾ ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಹಡಗಲಿ ಶಾಸಕ ಕೃಷ್ಣನಾಯ್ಕ್, ರಾಜ್ಯದ ಎಲ್ಲಾ ಅಭಿವೃದ್ಧಿ ಅನುದಾನ ನಿಗಮ ಮಂಡಳಿಯ ಅನುದಾನ ಸಚಿವರ, ಅಧಿಕಾರಿಗಳ ಖಾತೆಗೆ ಹಾಗೂ ವ್ಯಯುಕ್ತಿಕ ಖಾತೆಗೆ ಜಮಾ ಆಗುತ್ತದೆ, ಕೂಡಲೆ ಮುಖ್ಯಮಂತ್ರಿ ಗಳು ತನಿಖೆಗೆ ಒಳಪಡಿಸಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರಹೋರಾಟ ಮಾಡುವುದಾಗಿ ತಿಳಿಸಿದರು.

ಪಕ್ಷ ಜಿಲ್ಲಾಧ್ಯಕ್ಷ ಚೆನ್ನಬಸವನಗೌಡ, ಜಂಬಯ್ಯನಾಯಕ, ರಾಜ್ಯ ಯುವ ಮೋರ್ಚಾ ನಾಯಕ ಸಿಧಾರ್ಥಸಿಂಗ್ ಮುಖಂಡರು ಮಾತನಾಡಿ ಅಧಿಕಾರಿಯ ಆತ್ಮಹತ್ಯೆ ಈ ಎಲ್ಲಾ ಹಂತದ ಅವ್ಯವಹಾರ ಬಯಲಾಗುವಂತೆ ಮಾಡಿದೆ, ಈ ಹಣದ ರೂವಾರಿ ಯಾರು?, ಅಧಿಕಾರಿಯ ಆತ್ಮಹತ್ಯೆಗೆ ಹೊಣೆ ಯಾರು? ಆರ್ಥಿಕವಾಗಿ ದುರ್ಬಲರಾಗಿರುವ ಎಸ್.ಟಿ.ಸಮುದಾಯಕ್ಕೆ ನ್ಯಾಯ ಒದಗಿಸುವವರು ಯಾರು ಎಂದು ಪ್ರಶ್ನಿಸಿದ ಅವರು ಇದರ ಜೊತೆ ಕೇಂದ್ರ ಪುರಸ್ಕೃತ ಯೋಜನೆಗಳ ಅನುದಾನ 83 ಕೋಟಿ ಸಹ ದುರ್ಬಳಿಕೆಯಾಗಿದೆ ಎಲ್ಲವೂ ಸಹ ಮಾರ್ಚ್ ಕೊನೆಯವಾರದಲ್ಲಿಯೇ ನಡೆದಿರುವುದು ವಿಶೇಷವಾಗಿದೆ ಇಷ್ಟೊಂದು ದೊಡ್ಡ ಮಟ್ಟದ ಆರ್ಥಿಕ ಅವ್ಯವಹಾರ ಮುಖ್ಯಮಂತ್ರಿಗಳ ಗಮನಕ್ಕೆ ಇಲ್ಲದಂತೆ ಆಗಿದೆ ಎನ್ನುವುದು ಹೇಗೆ ?, ಇದರ ಹೊರತಾಗಿ ಎಸ್ಟಿ ಅಭಿವೃದ್ಧಿ ನಿಗಮದಲ್ಲಿ ಯಾವುದೆ ಚಟುವಟಿಕೆಗಳು ನಡೆಯುತ್ತಿಲ್ಲಾ ಬದಲಾಗಿ ಎಲ್ಲಾ ಹಣ ಚುನಾವಣೆಗೆ ಬಳಕೆ ಯಾಗಿದೆ ಎಂದುಬಲವಾಗಿ ಖಂಡಿಸಿದರು.

ಮುಖ್ಯಮಂತ್ರಿ ರಾಜೀನಾಮೆ ನೀಡಬೇಕು, ಆರ್ಥಿಕ ವ್ಯವಹಾರ ಸಿಬಿಐ ತನಿಖೆಯಾಗಬೇಕು ಎಂದು ಒತ್ತಾಯಿಸಿದರು ಕಿವಿಗೊಡದ ಹಿನ್ನೆಲೆಯಲ್ಲಿ ಮುತ್ತಿಗೆಗೆ ಮುಂದಾಗಲಾಗಿದೆ ಮುತ್ತಿಗೆ ಕಾರ್ಯಕ್ರದಲ್ಲಿ ಅಶೋಕ ಜೀರೆ, ಅಯ್ಯಾಳಿ ತಿಮ್ಮಪ್ಪ, ಕಿಚಡಿ ಕೊಟ್ರೇಶ, ಶಂಕರ ಮೇಟಿ. ಜಗದೀಶ ಕಮಟಗಿ, ಬಲಗುಣಸಿ ರಾಮಣ್ಣ, ಗುಜ್ಜಲ ಕಿರಣ್,ದ್ವಾರಕೇಶ್, ರೂಪೇಶ ಕುಮಾರ, ಸಾಲಿ ಸಿದ್ಧಯ್ಯಸ್ವಾಮಿ, ತಾರಿಹಳ್ಳಿ ಜಂಬೂನಾಥ, ಶ್ರೀನಿವಾಸ ಬಂಗಾತಿ, ಕಸಾಟಿ ಉಮಾಪತಿ, ಜಗನ್ನಾಥ, ರೇಖಾರಾಣಿ, ಕವಿತಾ, ಭಾರತಿ ಪಾಟೀಲ್, ಅನುರಾಧ, ಚಂದ್ರು ದೇವಲಾಪುರ, ರೇವಣಸಿದ್ಧಪ್ಪ ಸೇರಿದಂತೆ ನೂರಾರು ಸಂಖ್ಯೆಯ ಕಾರ್ಯಕರ್ತರು ಪಾಲ್ಗೊಂಡಿದ್ದರು. ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

# ಸಾರ್ವಜನಿಕ ಸೇವೆ ನಿರ್ಲಕ್ಷಿಸಿದರೆ ಶಿಸ್ತು ಕ್ರಮ ಗ್ಯಾರಂಟಿ: ಶಾಸಕ ಡಾ ಶ್ರೀನಿವಾಸ ಖಡಕ್ ಎಚ್ಚರಿಕೆ

ಕೂಡ್ಲಿಗಿ:-

ತಾಲೂಕಿನಲ್ಲಿ ಸಾರ್ವಜನಿಕರು ಸರಕಾರಿ ಕಚೇರಿಗಳಿಗೆ ಸಣ್ಣಪುಟ್ಟ ಕೆಲಸಗಳಿಗೂ ಅಲೆದಾಡುವಂತಾಗಿದೆ. ಹೀಗಾಗಿ, ತಾಲೂಕಿನ ಅಧಿಕಾರಿಗಳು ನಿದ್ದೆಯಿಂದ ಎದ್ದು ಸೇವೆಯಲ್ಲಿ ತೊಡಗಿಕೊಳ್ಳಿ. ನಿಮ್ಮ ಕಾರ್ಯವೈಖರಿ ಬದಲಾಗದಿದ್ದರೆ ಕ್ರಮಕೈಗೊಳ್ಳುವುದು ಗ್ಯಾರಂಟಿ ಎಂದು ಅಧಿಕಾರಿಗಳಿಗೆ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಖಡಕ್ ಎಚ್ಚರಿಕೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರ ಆವರಣದಲ್ಲಿ ಬುಧವಾರ ಆಯೋಜಿಸಿದ್ದ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಾರ್ವಜನಿಕರಿಗೆ ಸರಕಾರದ ಯೋಜನೆಗಳ ಸದುಪಯೋಗ ಸೇರಿ ನಾನಾ ಕುಂದು, ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ಹೆಚ್ಚಿನ ಹೆಚ್ಚಿನ ಆದ್ಯತೆ ನೀಡಿದೆ. ಆದರೆ, ಅಧಿಕಾರಿಗಳ ನಿರ್ಲಕ್ಷ್ಯದಿಂದ ಜನರಿಗೆ ಸ್ಪಂದನೆ ಸಿಗದಂತಾಗಿದೆ. ಹಾಗಾಗಿ, ತಾಲೂಕಿನ ಅಧಿಕಾರಿಗಳು ಜವಾಬ್ದಾರಿಯಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸವ ಮೂಲಕ ಜನಸಾಮಾನ್ಯರಿಗೆ ಸ್ಪಂದಿಸಿ. ಜನತಾ ದರ್ಶನದಲ್ಲಿ ಬಂದಿರುವ ಅರ್ಜಿಗಳಿಗೆ ಶೀಘ್ರವೇ ಪರಿಹಾರ ಸಿಗಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದ್ದು, ಗೋವಿಂದಗಿರಿ ತಾಂಡಾ ಕಂದಾಯ ಗ್ರಾಮ ಮಾಡುವುದು ಹಾಗೂ ಸ್ಥಗಿತವಾಗಿರುವ ಶುದ್ಧ ಕುಡಿವ ನೀರಿನ ಘಟಕ ಜನರಿಗೆ ಉಪಯೋಗವಾಗಲಿ ಎಂದು ಗ್ರಾಮಸ್ಥರು ಮನವಿ ಸಲ್ಲಿಸಿದರು. ಮಹದೇವಪುರ ಗ್ರಾಮದಲ್ಲಿರುವ ಅಂಗನವಾಡಿ ಕಟ್ಟಡದ ಜಾಗ ಒತ್ತುವರಿಯಾಗಿದ್ದು, ಕೊಳಚೆ ನೀರು ಹರಿಯಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಒತ್ತುವರಿ ತೆರವು ಮಾಡಿಸಲು ಗ್ರಾಪಂ ಸದಸ್ಯರು ಸೇರಿ ಮುಖಂಡರು ಮನವಿ ಸಲ್ಲಿಸಿದರು. ಕೆ.ರಾಯಾಪುರ ಗ್ರಾಮದ ಸರಕಾರಿ ಶಾಲೆಗೆ ದಾನವಾಗಿ ಕೊಟ್ಟಿರುವ ಸರ್ವೆನಂ463 ಬಿ ಆಸ್ತಿಯ 2 ಎಕರೆ ಜಾಗದಲ್ಲಿ ಕೆಲವರು ಅಕ್ರಮವಾಗಿ ಪ್ರಕರಣಗಳನ್ನು ಹಾಕಿದ್ದಾರೆ. ಹೀಗಾಗಿ, ಸರಕಾರಿ ಶಾಲೆಗೆ ಜಾಗ ಬಿಡಿಸಿಕೊಡುವಂತೆ ಸಾಕಷ್ಟು ಸಲ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದು ಗ್ರಾಮದ ಕೃಷ್ಣಮೂರ್ತಿ ಸೇರಿ ಗ್ರಾಮಸ್ಥರು ಡಿಸಿಗೆ ಅಹವಾಲು



ಸಲ್ಲಿಸಿದರು. ಕುಡಿವ ನೀರು, ಪಿಂಚಣಿ, ಪಡಿತರ ಚೀಟಿ, ಮಾಸಾಶನ, ಜಮೀನಿಗೆ ದಾರಿ, ಸ್ಮಶಾನ, ವಸತಿ, ಅಂಗನವಾಡಿ ಸೇರಿ ನಾನಾ ಸಮಸ್ಯೆಗಳ ಅರ್ಜಿ ಸ್ವೀಕರಿಸಿದ ಡಿಸಿ ದಿವಾಕರ ಅವರು ಕೆಲವು ಸ್ಥಳದಲ್ಲೇ ಪರಿಹಾರ ಸಿಗಲು ಸಂಬಂಧಿಸಿ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು. ಈ ಸಂದರ್ಭದಲ್ಲಿ ಜಿಪಂ ಸಿಇಒ ಸದಾಶಿವ ಬಿ.ಪ್ರಭು, ಸಹಾಯಕ ಆಯುಕ್ತ ನೊಂಗಾಯ್ಡ್ ಮಹಮ್ಮದ್ ಅಕ್ರಂ ಷಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ರ್‍ಲನ್, ತಹಸೀಲ್ದಾರ್ ಎಂ.ರೇಣುಕಾ, ತಾಪಂ ಇಒ ವೈ.ರವಿಕುಮಾರ್ ಸೇರಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

**ವೀಲ್‌ಚೇರ್‌ನಲ್ಲಿ ಬಂದಿದ್ದ ನಿವೃತ್ತ ಯೋಧ:** ಎರಡೂ ಕಾಲು ಕಳೆದುಕೊಂಡು ಅಂಗವಿಕಲನಾಗಿದ್ದು, ನಿವೃತ್ತನಾದ್ದರೂ ರಾಜ್ಯ ಸರಕಾರ ನಿವೇಶನ, ಮನೆ, ಜಮೀನು ನೀಡಿಲ್ಲ. ಇದರಿಂದ ಕುಟುಂಬದ ಜೀವನ ನಿರ್ವಹಣೆ ಕಷ್ಟವಾಗಿದೆ ಎಂದು ವೀಲ್‌ಚೇರ್‌ನಲ್ಲಿ ಆಗಮಿಸಿದ್ದ ಸಿಆರ್‌ಪಿಎಸ್ ನಿವೃತ್ತ ಯೋಧ ಕೂಡ್ಲಿಗಿ ತಾಲೂಕಿನ ಗುಂಡುಮುಣುಗು ಗ್ರಾಮದ ಶಕೀಲ್ ಬಾಷಾ ಡಿಸಿಯವರಿಗೆ ಮನವಿ ಸಲ್ಲಿಸಿದರು. ಅಕ್ರಮ ಸಕ್ರಮ ಅರ್ಜಿಗಳಿಗೆ ಶೀಘ್ರ ಪಟ್ಟಾ ನೀಡುವುದು, ಪಿಟಿಸಿಎಲ್ ಕಾಯ್ದೆಗೆ ಒಳಪಡುವ ಜಮೀನುಗಳ ತೀರ್ಮಾನ ಬಗೆಹರಿಸುವುದು ಸೇರಿ ನಾನಾ ಸಮಸ್ಯೆಗಳ ಕುರಿತು ದಸಂಸ ಜಿಲ್ಲಾ ಸಂಚಾಲಕ ಎಸ್.ದುರುಗೇಶ್ ನೇತೃತ್ವದಲ್ಲಿ ಮುಖಂಡರು ಮನವಿ ಸಲ್ಲಿಸಿದರು.

**ಬಿಇಒಗೆ ನೋಟಿಸ್ ಕೊಡಿ:** ಶಾಲೆಗಳಲ್ಲಿ ಬಿಸಿಯೂಟ ವಿವರ ಸೇರಿ ಯಾವುದೇ ವಿಷಯ ಸೂಚಿಸಿದ ಕುರಿತು ಕೇಳಿದರೂ ಗೊತ್ತಿಲ್ಲ ಎಂದು ಹೇಳುತ್ತಿರುವ ಬಿಇಒಗೆ ನೋಟಿಸ್ ನೀಡುವಂತೆ ಶಿಕ್ಷಣ ಇಲಾಖೆ ಮೇಲಧಿಕಾರಿಗಳಿಗೆ ಡಿಸಿ ದಿವಾಕರ್ ಸೂಚಿಸಿದರು. ಅಲ್ಲದೆ, ಮನೆ ಬಾಗಿಲಿಗೆ ಇಸ್ವತ್ತು ನೀಡದೇ ಇರುವ ಪಿಡಿಒಗಳ ವಿರುದ್ಧ ಗರಂ ಆದರು.

# ಹಾಲಿನ ದರ ಹೆಚ್ಚಳ ವಿರೋಧಿಸಿ ಬಿಜೆಪಿ ಪ್ರತಿಭಟನೆ



ಕಲಬುರಗಿ:-

ಹಾಲಿನ ದರ ಹೆಚ್ಚಳ ವಿರೋಧಿಸಿ ಮತ್ತು ಹಾಲಿನ ಪ್ರೋತ್ಸಾಹ ಧನ ಬಿಡುಗಡೆಗೆ ಆಗ್ರಹಿಸಿ ಬಿಜೆಪಿ ನಗರ ಜಿಲ್ಲಾ ರೈತ ಮೋರ್ಚಾ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಹಸು ಮತ್ತು ಹಾಲಿನ ಕ್ಯಾನ್‌ಗಳೊಂದಿಗೆ ಪ್ರತಿಭಟನೆ ನಡೆಸಲಾಯಿತು. ಹಾಲಿನ ದರ ಹೆಚ್ಚಳ ಮಾಡಿರುವುದನ್ನು ಕೂಡಲೇ ಹಿಂಪಡೆಯಬೇಕು, ಸರ್ಕಾರ ಕಳೆದ ಬಜೆಟ್‌ನಲ್ಲಿ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡಿದ್ದು, ಇದುವರೆಗೆ ರೈತರಿಗೆ ಪಾವತಿಯಾಗಿಲ್ಲ. ಕೂಡಲೇ ಪಾವತಿಸಬೇಕು, ರೈತ ವಿದ್ಯಾನಿಧಿ, ಭೂ-ಸಿರಿ ಯೋಜನೆ ಮರು ಜಾರಿ ಮಾಡಬೇಕು, ಕಿಸಾನ್ ಸಮ್ಮಾನ್ ಯೋಜನೆ ಅಡಿ ನೀಡುತ್ತಿದ್ದ ರೂ.4 ಸಾವಿರ ರೂ ಮತ್ತು ರೈತರ ಡ್ರಿಪ್ ಯೋಜನೆಯ ಶೇ.75 ಸಹಾಯಧನ ಮುಂದುವರಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಶಾಸಕ ಬಸವರಾಜ ಮತ್ತಿಮೂಡ, ಗ್ರಾಮೀಣ ಅಧ್ಯಕ್ಷ ಶಿವರಾಜ ಪಾಟೀಲ ರದ್ದೇವಾಡಗಿ, ನಗರ ಅಧ್ಯಕ್ಷ ಚಂದು ಪಾಟೀಲ, ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಪಾಟೀಲ, ರೈತ ಮೋರ್ಚಾ ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಬಸವರಾಜ ಮಾಲಿಪಾಟೀಲ, ನಗರ ಅಧ್ಯಕ್ಷ ಲಿಂಗರಾಜ ಧೂಳಗೊಂಡ, ಮಲ್ಲಣ್ಣ ಕುಲಕರ್ಣಿ, ಶ್ರೀಶೈಲ ಪಾಟೀಲ, ಮಹಾದೇವ ಬೆಳಮಗಿ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಮನುಕುಲದ ಉದ್ಧಾರಕ ಡಾ.ಬಿ.ಆರ್ ಅಂಬೇಡ್ಕರ್ ; ಡಾ.ಮೇಧಾವಿನಿ ಎಸ್.ಕಟ್ಟಿ

ಕಲಬುರಗಿ:-

ಡಾ.ಬಿ.ಆರ್.ಅಂಬೇಡ್ಕರ್ ಅವರು ಮನುಕುಲದ ಏಳಿಗೆಗೆ ಶ್ರಮಿಸಿದ ಮಹಾನ್ ಚೇತನ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ರಾದ ಡಾ.ಮೇಧಾವಿನಿ ಎಸ್.ಕಟ್ಟಿ ಹೇಳಿದರು.

ನಗರದ ಕೆಪಿಇ ಶಿಕ್ಷಣ ಸಂಸ್ಥೆಯ ಡಾ.ಅಂಬೇಡ್ಕರ ಪದವಿ ಮಹಾವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 2023 -24ನೇ ಶೈಕ್ಷಣಿಕ ಸಾಲಿನ ಡಾ.ಅಂಬೇಡ್ಕರ್ ವಿಚಾರ ವೇದಿಕೆಯ ಸಮಾರೋಪ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ತಿಳಿಯುವುದು ಅಥವಾ ಅರ್ಥ ಮಾಡಿಕೊಳ್ಳುವುದು ಒಂದೇ. ಭಾರತವನ್ನು ಒಮ್ಮೆ ಸುತ್ತಿ ನೋಡುವುದು ಒಂದೇ. ಅವರ ವಿಚಾರವನ್ನು ವಿಶ್ವವೇ ಒಪ್ಪಿಕೊಂಡಿದೆ. ಆದರೆ, ಅವರನ್ನು ನಾವಿನ್ನು



ಸರಿಯಾಗಿ ಅರ್ಥ ಮಾಡಿಕೊಂಡಿಲ್ಲ ಎನ್ನುವುದು ತುಂಬಾ ಕಳವಳಕಾರಿ ಸಂಗತಿ ಎಂದರು. ಸಾಮಾಜಿಕ ಅಸಮಾನತೆಯ ವಿರುದ್ಧ ಹೋರಾಡಿದ ಮಹಾನ್ ಚೇತನ, ಭವ್ಯ ಭವಿಷ್ಯತಿನ ಭಾರತವನ್ನು ಕಟ್ಟುವ ಶಕ್ತಿ ಹೊಂದಿದ ಏಕೈಕ ವ್ಯಕ್ತಿ ಅಂಬೇಡ್ಕರ್ ರವರು. ಅವರ ಜ್ಞಾನ ಇಡೀ ಜಗತ್ತು ಒಪ್ಪಿಕೊಂಡಿದೆ ಅದಕ್ಕಾಗಿಯೇ ಅವರನ್ನು ಜ್ಞಾನದ ಸಂಕೇತ ಎಂದು ಸಾರಿದೆ. ಮಹಿಳಾ ಸ್ವಾತಂತ್ರ್ಯ, ಮತದಾನದ ಮಹತ್ವ, ಅರ್ಥಶಾಸ್ತ್ರದ ಬಗ್ಗೆ ಸಾಕಷ್ಟು ಬರೆದಿದ್ದಾರೆ. ಜಾತಿ ಪದ್ಧತಿ, ಅನಿಷ್ಟ ಮೌಢ್ಯ ವಿರುದ್ಧ ಹೋರಾಡಿದ್ದಾರೆ. ಸುಮಾರು 60ಕ್ಕೂ ಹೆಚ್ಚು ವಿಷಯಗಳಲ್ಲಿ ಪರಿಪೂರ್ಣತೆಯನ್ನು ಹೊಂದಿದ ವ್ಯಕ್ತಿ ಬಾಬಾ ಸಾಹೇಬರು. ಅವರ ಜ್ಞಾನ ಅರಿಯಲು ಯುವಕ, ಯುವತಿಯರು ಅವರ ಕೃತಿಗಳನ್ನು ಹೆಚ್ಚು ಓದಬೇಕು ಎಂದು ಹೇಳಿದರು. ಸಮಾರಂಭದ ಮುಖ್ಯ ಭಾಷಣಕಾರರಾದ ಕಡಗಂಚಿಯ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಪ್ರಾಧ್ಯಾಪಕರಾದ ಡಾ.ಅಪ್ಪಗೆರೆ ಸೋಮಶೇಖರ್ ಅವರು ಮಾತನಾಡುತ್ತ, ಬಾಬಾ ಸಾಹೇಬರ ವಿಚಾರಗಳು ಜಗತ್ತಿಗೆ ಅನಿವಾರ್ಯವಾಗಿವೆ. ಏಕೆಂದರೆ ಜಗತ್ತಿನ ಬಹುದೊಡ್ಡ ಅಹಿಂಸವಾದಿ ಅಂಬೇಡ್ಕರ್ ಆಗಿದ್ದರು. ಮಾನಸಿಕ ಗುಲಾಮಗಿರಿಂದ ಹೊರ ಬಂದರೆ ದೇಶ ಅಭಿವೃದ್ಧಿ ಹೊಂದುತ್ತದೆ. ಮೆದುಳುಗಳನ್ನು ಮತ್ತು ಮನಸುಗಳನ್ನು ಸ್ವಚ್ಛ ಮಾಡಿಕೊಳ್ಳಬೇಕು ಎಂದ-ರೆ ಭಾರತದ ಸಂವಿಧಾನವನ್ನು ಸರಿಯಾದ ರೀತಿಯಲ್ಲಿ ಅರ್ಥ ಮಾಡಿಕೊಂಡು ಜೀವನವನ್ನು ಮುನ್ನಡೆಸಲು ಸಾಧ್ಯವಾಗುತ್ತದೆ. ಅಂಬೇಡ್ಕರ್ ಅವರ ಜೀವನ ಬುದ್ಧನ ಮೂಲಕ ಆರಂಭಗೊಂಡು ಅವರ ಕೊನೆಯ ದಿನಗಳು ಕೂಡ ಬುದ್ಧ ಮತ್ತು ಆತನ ಧಮ್ಮ ಕೃತಿ ಬರೆಯುವುದರ ಮೂಲಕ ಕಂಡುಕೊಂಡಿದ್ದಾರೆ. ಅದಕ್ಕಾಗಿ ವಿದ್ಯಾರ್ಥಿಗಳು ತಮ್ಮ ಭವಿಷ್ಯತ್ತಿನ ಭಾರತವನ್ನು ಕಟ್ಟಬೇಕಾದರೆ ತಾವುಗಳು ಒಳ್ಳೆಯ ಅಧ್ಯಯನ ಮತ್ತು ಅಧ್ಯಾಪನದಲ್ಲಿ ತೊಡಗಿಸಿಕೊಂಡು ಪ್ರಬುದ್ಧ ಭಾರತವನ್ನು ನಿರ್ಮಾಣ ಮಾಡಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಕೆಪಿಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶಾಂತಪ್ಪ ಸೂರನ್ ಅವರು ವಹಿಸಿದ್ದರು ವೇದಿಕೆಯ ಮೇಲೆ ಸಂಸ್ಥೆಯ ಆಡಳಿತ ಅಧಿಕಾರಿಗಳಾದ ಡಾ. ಚಂದ್ರಶೇಖರ್ ಶೀಲವಂತ, ಕಾಲೇಜಿನ ಪ್ರಾಚಾರ್ಯರಾದ ಡಾ. ವಿಜಯಕುಮಾರ್ ಡಿ, ಐಕ್ಯೂಏಸಿ ಸಂಯೋಜಕರಾದ ಡಾ. ನಿರ್ಮಲ ಸಿರಗಾಪೂರ ಇದ್ದರು.




ಟಿ20 ವಿಶ್ವಕಪ್‌ನಲ್ಲಿ ದ.ಆಫ್ರಿಕಾ ವಿರುದ್ಧ ಜಯಭೇರಿ

# 17 ವರ್ಷಗಳ ಬಳಿಕ ಕಪ್ ಗೆದ್ದ ಭಾರತ

## ಅಜೇಯ ತಂಡವಾಗಿ ಫೈನಲ್ ಪ್ರವೇಶಿಸಿದ್ದ ಭಾರತ । ಸೋಲಿನ ದವಡೆಯಿಂದ ಭಾರತವನ್ನು ಪಾರು ಮಾಡಿದ ಬೌಲರ್ಸ್

**ಬ್ರಿಡ್ಜ್ ಟೌನ್:–**

ಇಲ್ಲಿನ ಕೆನ್ನಿಂಗ್ಟನ್ ಓವಲ್ ಸ್ಟೇಡಿಯಂನಲ್ಲಿ ನಡೆದ ಟಿ20 ವಿಶ್ವಕಪ್ ನ ಫೈನಲ್ ಪಂದ್ಯದಲ್ಲಿ ಭಾರತ ತಂಡವು ದಕ್ಷಿಣ ಆಫ್ರಿಕಾ ಸೋಲಿಸಿ 17 ವರ್ಷಗಳ ಬಳಿಕ ಟಿ20 ವಿಶ್ವಕಪ್ ಗೆ ಮುತ್ತಿಟ್ಟಿದೆ. ಆ ಮೂಲಕ ದಕ್ಷಿಣ ಆಫ್ರಿಕಾಗೆ ಮತ್ತೆ ಚೋಕರ್ಸ್ ಪಟ್ಟ ಖಾಯಂ ಆಗಿದೆ. 2007ರಲ್ಲಿ ಮಹೇಂದ್ರ ಸಿಂಗ್ ಧೋನಿ ನಾಯಕತ್ವದಲ್ಲಿ ದಕ್ಷಿಣ ಆಫ್ರಿಕಾದಲ್ಲಿ ಚೊಚ್ಚಲ ವಿಶ್ವಕಪ್ ಗೆದ್ದಿದ್ದ ಭಾರತ, ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಸೋಲಿಸಿ ಚಾಂಪಿಯನ್ ಪಟ್ಟ ಪಡೆಯಿತು. 2007ರಲ್ಲಿ ಮಹೇಂದ್ರ ಸಿಂಗ್ ಧೋನಿ ನಾಯಕತ್ವದಲ್ಲಿ ಆಡಿದ್ದ ರೋಹಿತ್ ಶರ್ಮಾ, ತಮ್ಮ ನಾಯಕತ್ವದಲ್ಲಿ ಭಾರತ–ಕ್ಕೆ ಮತ್ತೆ ವಿಶ್ವಕಪ್ ತಂದರು. 20ನೇ ಓವರ್ ಆರಂಭದಲ್ಲಿ ಸೂರ್ಯ ಕುಮಾರ್ ಯಾದವ್ ಪಡೆದ ಡೇವಿಡ್ ಮಿಲ್ಲರ್ ಅವರ ಬೌಂಡರಿ ಲೈನ್ ಕ್ಯಾಚ್, 2007 ರ ವಿಶ್ವಕಪ್ ನಲ್ಲಿ ಪಾಕಿಸ್ತಾನದ ಮಿಸ್ಬಾ ಉಲ್ ಹಕ್ ಕ್ಯಾಚ್ ಪಡೆದ ಶ್ರೀಶಾಂತ್ ಅವರನ್ನು ನೆನಪಿಸಿತು. 140 ಕೋಟಿ ಭಾರತೀಯರ ಕನಸು ಕೊನೆಗೂ ನನಸಾಯಿತು. ಟೀಮ್ ಇಂಡಿಯಾ 2ನೇ ಟಿ20 ವಿಶ್ವಕಪ್ ಟ್ರೋಫಿ ಗೆದ್ದು ದಾಖಲೆ ಬರೆಯಿತು. 2024ರ ಟಿ20 ವಿಶ್ವಕಪ್ ಫೈನಲ್ ನಲ್ಲಿ ರೋಚಕ ಗೆಲುವು ಸಾಧಿಸಿದ ರೋಹಿತ್ ಪಡೆ, ಎರಡು ಚುಟುಕು ಟ್ರೋಫಿ ಗೆದ್ದ 3ನೇ ತಂಡ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಇದರೊಂದಿಗೆ ಏಳೇ ತಿಂಗಳಲ್ಲಿ ಏಕದಿನ ವಿಶ್ವಕಪ್ ಸೋಲಿನ ನೋವನ್ನು ಮರೆಸಿತು. ಫೈನಲ್‌ನಲ್ಲಿ ಸೌತ್ ಆಫ್ರಿಕಾ ವಿರುದ್ಧ 8 ರನ್‌ಗಳ ರೋಚಕ ಜಯ ದಾಖಲಿಸಿ ಕೊನೆಗೂ ಟ್ರೋಫಿ ಬರ ಕೊನೆಗೊಳಿಸಿತು. 2013ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ನಂತರ ಅಂದರೆ 11 ವರ್ಷಗಳ ಬಳಿಕ ಐಸಿಸಿ ಟ್ರೋಫಿ ಗೆದ್ದು ಬೀಗಿದ ಭಾರತ ತಂಡವು, ರೋಹಿತ್ ಶರ್ಮಾ ನಾಯಕತ್ವದಲ್ಲಿ ಚಾಂಪಿಯನ್ ಪಟ್ಟಕ್ಕೇರಿತು. 2011ರ ನಂತರ 13 ವರ್ಷಗಳ ವಿಶ್ವಕಪ್ ಗೆದ್ದಿತು. ಆದರೆ ಸೌತ್ ಆಫ್ರಿಕಾ ಚೊಚ್ಚಲ ವಿಶ್ವಕಪ್ ಟ್ರೋಫಿ ಗೆಲ್ಲಲು ವಿಫಲವಾಯಿತು. ತನಗಿರುವ ಚೋಕರ್ಸ್ ಹಣೆಪಟ್ಟಿಯನ್ನು ಕಳಚಲು ವಿಫಲವಾಯಿತು. 24 ಎಸೆತಗಳಲ್ಲಿ 26 ರನ್ ಬೇಕಿದ್ದ ಅವಧಿಯಲ್ಲಿ ಭಾರತ ಗೆಲ್ಲುವುದು ಬಹುತೇಕ ಕಷ್ಟವಾಗಿತ್ತು. ಆದರೆ, ಆ ಬಳಿಕ ನಡೆದಿದ್ದೇ ಪವಾಡ. ಕಪಿಲ್ ದೇವ್, ಎಂಎಸ್ ಧೋನಿ ನಂತರ ರೋಹಿತ್ ಶರ್ಮಾ ವಿಶ್ವಕಪ್ ಗೆದ್ದ ಮೂರನೇ ಭಾರತೀಯ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾ–ರೆ. ಬಾರ್ಬಡೋಸ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ತಂಡ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು. ವಿರಾಟ್ ಕೊಹ್ಲಿ ಅವರ ಬ್ಯಾಟಿಂಗ್ ಬಲದಿಂದ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 176 ರನ್‌ಗಳ ಸ್ಪರ್ಧಾತ್ಮಕ ಮೊತ್ತ ಪೇರಿಸಿತು. ಈ ಗುರಿ ಬೆನ್ನಟ್ಟಿದ ಸೌತ್ ಆಫ್ರಿಕಾ, ಬೆಂಕಿ ಬಿರುಗಾಳಿ ಬ್ಯಾಟಿಂಗ್ ನಡೆಸಿತು. ಅದರಲ್ಲೂ ಹೆನ್ರಿಚ್ ಕ್ಲಾಸೆನ್ ಅದ್ಭುತ ಪ್ರದರ್ಶನ ನೀಡಿದರು. 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 168 ರನ್ ಗಳಿಸಿತು. 177 ರನ್‌ಗಳ ಗುರಿ ಬೆನ್ನಟ್ಟಿದ ಸೌತ್ ಆಫ್ರಿಕಾ ಆರಂಭದಲ್ಲೇ ಆಘಾತ–ಕ್ಕೆ ಒಳಗಾಯಿತು. ರೀಜಾ ಹೆಂಡ್ರಿಕ್ಸ್ ಮತ್ತು ಏಡನ್ ಮಾರ್ಕ್ರಮ್ ಬೇಗನೇ ಔಟಾದರು.

### ವಿರಾಟ್ ಕೊಹ್ಲಿ ಹೋರಾಟ

ಮೊದಲು ಬ್ಯಾಟಿಂಗ್ ನಡೆಸಿದ ಟೀಮ್ ಇಂಡಿಯಾ ಸ್ಫೋಟಕ ಆರಂಭ ಪಡೆಯುವ ಭರವಸೆ ನೀಡಿತು. ಆದರೆ ಎರಡನೇ ಓವರ್ ಎಸೆದ ಕೇಶವ್ ಮಹಾರಾಜ್, ಭಾರತಕ್ಕೆ ಡಬಲ್ ಆಘಾತ ನೀಡಿದರು. ರೋಹಿತ್ ಶರ್ಮಾ (9) ಮತ್ತು ರಿಷಭ್ ಪಂತ್ (47) ಅವರನ್ನ ಹೊರದಬ್ಬಿದರು. ನಂತರ ಸೂರ್ಯಕುಮಾರ್ (3) ಕೂಡ ಹೆಚ್ಚು ಕ್ರೀಸ್‌ನಲ್ಲಿ ನಿಲ್ಲಲಿಲ್ಲ. ಈ ವೇಳೆ ಒಂದಾದ ವಿರಾಟ್ ಕೊಹ್ಲಿ ಮತ್ತು ಅಕ್ಷರ್ ಪಟೇಲ್ ತಂಡವನ್ನು ರಕ್ಷಿಸಿದರು. ಅಕ್ಷರ್ ಪಟೇಲ್ ಅಬ್ಬರದ 47 ರನ್ ಸಿಡಿಸಿದರೆ, ವಿರಾಟ್ ಕೊಹ್ಲಿ ಟೂರ್ನಿಯಲ್ಲಿ ಮೊದಲ ಅರ್ಧಶತಕ ಸಿಡಿಸಿದರು.

ಜಸ್ಪ್ರೀತ್ ಬುಮ್ರಾ ಮತ್ತು ಅರ್ಷದೀಪ್ ಸಿಂಗ್ ಭಾರತಕ್ಕೆ ಮುನ್ನಡೆ ತಂದುಕೊಟ್ಟರು. ಆದರೆ ಆ ಬಳಿಕ ಟ್ರಿಸ್ಟಾನ್ ಸ್ಟಬ್ಸ್ ಮತ್ತು ಕ್ವಿಂಟನ್ ಡಿ ಕಾಕ್ ಬೌಲರ್‌ಗಳ ಮೇಲೆ ಸವಾರಿ ನಡೆಸಿದರು. 3ನೇ ವಿಕೆಟ್‌ಗೆ 58 ರನ್‌ಗಳ ಪಾಲುದಾರಿಕೆ ಬಂತು. ಈ ಹಂತದಲ್ಲಿ ಅಕ್ಷರ್ ಪಟೇಲ್ ವಿಕೆಟ್ ಪಡೆದರು. ಸ್ಟಬ್ಸ್ 31 ರನ್ ಗಳಿಸಿ ಔಟಾದರು. ಡಿ ಕಾಕ್ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿದರೆ, ಸ್ಟಬ್ಸ್ ಬಳಿಕ ಕಣಕ್ಕಿಳಿದ ಹೆನ್ರಿಚ್ ಕ್ಲಾಸೆನ್ ಸ್ಫೋಟಕ ಬ್ಯಾಟಿಂಗ್‌ಗೆ ಒತ್ತು ಕೊಟ್ಟರು. ಕ್ರೀಸ್‌ಗೆ ಬಂದ ತಕ್ಷಣವೇ 3 ಸಿಕ್ಸರ್ ಚಚ್ಚಿದರು. ಪಂದ್ಯ ಕೈ ತಪ್ಪುತ್ತಿದ್ದ ಹಂತದಲ್ಲಿ ಅರ್ಷದೀಪ್ ಮುನ್ನಡೆ ತಂದುಕೊಟ್ಟರು. ಕ್ವಿಂಟನ್ ಡಿ ಕಾಕ್ ಉಪಯುಕ್ತ 39 ರನ್ ಗಳಿಸಿ ಕ್ಯಾಚ್ ನೀಡಿದರು.

ವಿಕೆಟ್ ಪತನದ ನಡುವೆಯೂ ಕ್ಲಾಸೆನ್ ಮತ್ತು ಡೇವಿಡ್ ಮಿಲ್ಲರ್ ಟೀಮ್ ಇಂಡಿ–ಯಾ ಬೌಲರ್‌ಗಳನ್ನು ಚೆಂಡಾಡಿದರು. ಕ್ಲಾಸೆನ್ ಕೇವಲ 23 ಎಸೆತಗಳಲ್ಲಿ ಅರ್ಧಶತಕ ಸಿಡಿಸಿದರು. ಆದರೆ ಅರ್ಧಶತಕದ ಬೆನ್ನಲ್ಲೇ ಕ್ಲಾಸೆನ್ ಅವರನ್ನು ಹಾರ್ದಿಕ್ ಪಾಂಡ್ಯ ಹೊರ ಹಾಕಿದರು. ಆಗ ತಂಡದ ಗೆಲುವಿಗೆ ಬೇಕಿದ್ದದ್ದು 24 ಎಸೆತಗಳಲ್ಲಿ 26 ರನ್ ಮಾತ್ರ. ಆದರೆ ಈ ಹಂತದಲ್ಲಿ ಭಾರತೀಯ ಬೌಲರ್‌ಗಳು ಟೈಟ್ ಬೌಲಿಂಗ್ ನಡೆಸಿದರು. 17ನೇ ಓವರ್‌ನಲ್ಲಿ 4 ರನ್ ನೀಡಿದರೆ, 18ನೇ ಓವರ್‌ನಲ್ಲಿ 2 ರನ್ ಮಾತ್ರ. 19ನೇ ಓವರ್‌ನಲ್ಲಿ 4 ರನ್ ಬಂತು. ಹೀಗಾಗಿ ಕೊನೆಯ ಓವರ್‌ನಲ್ಲಿ ಆಫ್ರಿಕಾ ಗೆಲುವಿಗೆ ಬೇಕಿದ್ದದ್ದು 16 ರನ್. ಹಾರ್ದಿಕ್ ಎಸೆದ ಈ ಓವರ್‌ನಲ್ಲಿ ಮಿಲ್ಲರ್ ಸಿಕ್ಸರ್ ಸಿಡಿಸಲು ಯತ್ನಿಸಿದರು. ಆದರೆ ಸೂರ್ಯಕುಮಾರ್ ಅದ್ಭುತ ಕ್ಯಾಚ್ ಹಿಡಿದು ತಂಡಕ್ಕೆ ತಿರುವು ಕೊಟ್ಟರು. 4ನೇ ವಿಕೆಟ್‌ಗೆ ಅರ್ಧಶತಕ ಜೊತೆಯಾಟವನ್ನೂ ಆಡಿದ್ದಲ್ಲದೆ, ತಂಡದ ಮೊತ್ತವನ್ನು 100ರ ಗಡಿ ದಾಟಿಸಿದರು. ನಂತರ ಶಿವಂ ದುಬೆ ಮತ್ತು ವಿರಾಟ್ ಕೊಹ್ಲಿ ಕೂಡ ಆಕರ್ಷಕ ಆಟವಾಡಿದರು. 5ನೇ ವಿಕೆಟ್‌ಗೆ 50+ಪಾಲುದಾರಿಕೆ ಒದಗಿಸಿದರು. ಆದ–ರೆ ಕೊಹ್ಲಿ 59 ಎಸೆತಗಳಲ್ಲಿ 6 ಬೌಂಡರಿ, 1 ಸಿಕ್ಸರ್ ಸಹಿತ 76 ರನ್ ಸಿಡಿಸಿ ಔಟಾದರು. ಕೊನೆಯಲ್ಲಿ ಶಿವಂ ದುಬೆ 27, ಹಾರ್ದಿಕ್ ಪಾಂಡ್ಯ 5*, ರವೀಂದ್ರ ಜಡೇಜಾ 2 ರನ್ ಗಳಿಸಿದರು. ಕೇಶವ್ ಮಹಾರಾಜ್, ಆನ್ರಿಚ್ ನೋಕಿಯಾ ತಲಾ 2 ವಿಕೆಟ್ ಪಡೆದರು.

## ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾಗೆ ಶುಭ ಕೋರಿದ ಸಿಎಂ



**ಬೆಂಗಳೂರು:–**

ಟೀಂ ಇಂಡಿಯಾ ಟಿ20 ವಿಶ್ವಕಪ್ ಟ್ರೋಫಿ ಮುಡಿಗೇರಿಸಿಕೊಂಡ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟೀಂ ಇಂಡಿಯಾಗೆ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ವಿಶ್ವಕಪ್ ವಿಜೇತ ಭಾರತ ತಂಡಕ್ಕೆ ಅಭಿನಂದನೆಗಳು. ನಿರ್ಣಾಯಕ ಹಂತದಲ್ಲಿ ನಮ್ಮವರು ತೋರಿದ ಸಂಘಟಿತ ಪ್ರದರ್ಶನ ಪಂದ್ಯದ ದಿಕ್ಕನ್ನೇ ಬದಲಿಸಿತು. ಇಡೀ ಪಂದ್ಯಾವಳಿಯಲ್ಲಿ ಒಂದು ಪಂದ್ಯವನ್ನೂ ಸೋಲದೆ ಅಜೇಯರಾಗುಳಿದು ವಿಶ್ವಕಪ್ ಟಿ20 ಜಯಿಸಿದ ಭಾರತ ತಂಡದ ಸಾಧನೆ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದ್ದಾರೆ.

ಒಂದು ಹಂತದಲ್ಲಿ ಗೆಲುವಿನ ಸನಿಹಕ್ಕೆ ಬಂದು ಕಡೇ ಕ್ಷಣದಲ್ಲಿ ಪಂದ್ಯ ಸೋತಿರುವ ದಕ್ಷಿಣ ಆಫ್ರಿಕಾ ತಂಡದ ಆಟವೂ ಮೆಚ್ಚತಕ್ಕದ್ದೆ. ಇದೊಂದು ಐತಿಹಾಸಿಕ ಕ್ಷಣ. ಕ್ರಿಕೆಟ್ ಪ್ರೇಮಿಯಾದ ನನಗೆ ನಮ್ಮವರ ಗೆಲುವು ಅತ್ಯಂತ ಖುಷಿಕೊಟ್ಟಿದೆ.

ಕೋಟ್ಯಂತರ ಜನರ ಹರಕೆ, ಹಾರೈಕೆಗಳು ಕಡೆಗೂ ಫಲಕೊಟ್ಟಿದೆ, ವಿಶ್ವಕಪ್ ಮರಳಿ ಭಾರತದ ಮಡಿಲು ಸೇರಿದೆ ಎಂದು ತಿಳಿಸಿದ್ದಾರೆ. ಅದರಂತೆ ಹೆಚ್'ಡಿ.ಕುಮಾರ ಸ್ವಾಮಿಯವರು ಪೋಸ್ಟ್ ಮಾಡಿ, ಟಿ20 ವಿಶ್ವಕಪ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ರೋಚಕ ಗೆಲುವು ಸಾಧಿಸಿದ ರೋಹಿತ್ ಶರ್ಮ ನೇತೃತ್ವದ ಭಾರತ ತಂಡಕ್ಕೆ ಶುಭಾಶಯಗಳು ಮತ್ತು ಸಮಸ್ತ ಭಾರತೀಯರ ಪರವಾಗಿ ಅಭಿನಂದನೆಗಳು. ಅನೇಕ ರೋಚಕ ತಿರುವುಗಳ ಫೈನಲ್ ಪಂದ್ಯ ಭಾರತೀಯರೆಲ್ಲರನ್ನೂ ತುದಿಗಾಲ ಮೇಲೆ ನಿಲ್ಲಿಸಿತ್ತು. ಎಲ್ಲರ ಆಕಾಂಕ್ಷೆ, ನಿರೀ–ಕ್ಷೆಯಂತೆ ಭಾರತ ಗೆದ್ದು ಬೀಗಿದೆ. ನಮ್ಮ ಹೆಮ್ಮೆಯ ತಂಡಕ್ಕೆ ಶುಭವಾಗಲಿ ಎಂದು ತಿಳಿಸಿದ್ದಾರೆ.

## ಟೀಂ ಇಂಡಿಯಾಗೆ ಪ್ರಧಾನಿ ಮೋದಿ ಸೇರಿದಂತೆ ಗಣ್ಯರಿಂದ ಅಭಿನಂದನೆ

**ನವದೆಹಲಿ: –**

ಟೀಂ ಇಂಡಿಯಾ ಟಿ20 ವಿಶ್ವಕಪ್ ಟ್ರೋಫಿ ಮುಡಿಗೇರಿಸಿಕೊಳ್ಳುತ್ತಿದ್ದಂತೆ ಶುಭಾಶಗಳ ಮಹಾಪೂರವೇ ವ್ಯಕ್ತವಾಗುತ್ತಿದೆ.



ಬ್ರಿಡ್ಜ್‌ಟೌನ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದ ಕೊನೆಯ ನಾಲ್ಕು ಓವರ್‌ಗಳು ತೀವ್ರ ಜಿದ್ದಾಜಿದ್ದಿನಿಂದ ಕೂಡಿತ್ತು. ಅಂತಿಮವಾಗಿ ಭಾರತ 7 ರನ್ ಗಳಿಂದ ದಕ್ಷಿಣ ಆಫ್ರಿಕಾವನ್ನು ಮಣಿಸಿ ಟ್ರೋಫಿಯನ್ನು ಎತ್ತಿಹಿಡಿದಿದೆ. ಇದು ಟೀಂ ಇಂಡಿ–ಯಾದ ಎರಡನೇ ಟಿ20 ವಿಶ್ವಕಪ್ ಟ್ರೋಫಿ ಆಗಿದೆ. ಇನ್ನು 2007ರಲ್ಲಿ ಎಂಎಸ್ ಧೋನಿ ನಾಯಕತ್ವದಲ್ಲಿ ಮೊದಲ ಟಿ20 ವಿಶ್ವಕಪ್ ಟ್ರೋಫಿ ಗೆದ್ದಿತ್ತು.

ಇನ್ನು ಟೀಂ ಇಂಡಿಯಾ ಟಿ20 ವಿಶ್ವಕಪ್ ಗೆಲ್ಲುತ್ತಿದ್ದಂತೆ ಪ್ರಧಾನಿ ನರೇಂದ್ರ ಮೋದಿ ಅವರು ತಂಡದ ಆಟಗಾರರಿಗೆ ಶುಭಾಶಯ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ವೀಡಿಯೋವನ್ನು ಪೋಸ್ಟ್ ಮಾಡಿದ ಪ್ರಧಾನಿ ಮೋದಿ, ತಂಡವು ಟಿ20 ವಿಶ್ವಕಪ್ ಅನ್ನು ಮನೆಗೆ ತಂದಿರುವುದು ನಮಗೆ ಹೆಮ್ಮೆ ತಂದಿದೆ ಎಂದು ಹೇಳಿದ್ದಾರೆ. ಈ ಗೆಲುವು ಪ್ರತಿಯೊಬ್ಬ ಭಾರತೀಯನ ದೊಡ್ಡ ವಿಜಯವಾಗಿದೆ. ಭಾರತೀಯ ಆಟಗಾರರು ವಿಶ್ವಕಪ್ ಟ್ರೋಫಿ ಜೊತೆಗೆ ಕೋಟ್ಯಂತರ ಭಾರತೀಯರ ಹೃದಯವನ್ನೂ ಗೆದ್ದಿದ್ದಾರೆ. ಒಂದೇ ಒಂದು ಪಂದ್ಯವನ್ನು ಸೋಲದೆ ಈ ದಿಗ್ವಿಜಯವನ್ನು ಸಾಧಿಸಿದ್ದೀರಿ ಎಂದು ಹೇಳಿದ್ದಾರೆ.

**ಟೀಂ ಇಂಡಿಯಾ–ನರೇಂದ್ರ ಮೋದಿ**

ಇದೇ ವೇಳೆ ಟೀಂ ಇಂಡಿಯಾಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಗೃಹ ಸಚಿವ ಅಮಿತ್ ಶಾ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ದೇಶದ ಎಲ್ಲ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

## ಗೆಲುವಿನ ಸವಿ ನೆನಪಿಗಾಗಿ ಪಿಚ್‌ನ ಮಣ್ಣು ತಿಂದು, ಧನ್ಯತೆ ಅರ್ಪಿಸಿದ ರೋಹಿತ್



ಬಾರ್ಬಡೋಸ್: ಟಿ20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು 7 ರನ್‌ಗಳಿಂದ ಮಣಿಸಿದ ಭಾರತ ಎರಡನೇ ಬಾರಿಗೆ ಟ್ರೋಫಿ ಮುಡಿಗೇರಿಸಿಕೊಂಡಿತು. ಜೊತೆಗೆ 13 ವರ್ಷಗಳ ಟ್ರೋಪಿ ಬರ ಕೂಡಾ ನೀಗಿದೆ. ಇದಕ್ಕೆ ಕಾರಣವಾದ ಬಾರ್ಬಡೋಸ್ ಕ್ರೀಡಾಂಗಣದ ಪಿಚ್ ನ ಒಂದು ಚಿಟಿಕೆ ಮಣ್ಣನ್ನು ರೋಹಿತ್ ಶರ್ಮಾ ಬಾಯಲ್ಲಿ ಹಾಕುವ ಮೂಲಕ ಧನ್ಯತೆ ಅರ್ಪಿಸಿದ್ದಾರೆ.

ಈ ವಿಡಿಯೊವನ್ನು ಐಸಿಸಿ ತನ್ನ ಅಧಿಕೃತ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಂಡಿದೆ.

ಪ್ರತಿ ವಿಂಬಲ್ಡನ್ ಗೆಲುವಿನ ನಂತರ ಟೆನಿಸ್ ದಂತಕಥೆ ನೊವಾಜ್ ಜೊಕೊವಿಕ್ ಮೈದಾನದಲ್ಲಿ ಒಂದೆರಡು ಹುಲ್ಲು ತಿನ್ನುತ್ತಾರೆ.

ಅವರು 2018 ರಿಂದ ಹುಲ್ಲು ತಿನ್ನುವ ಮೂಲಕ ತಮ್ಮ ವಿಂಬಲ್ಡನ್ ವಿಜಯೋತ್ಸಾವ ಆಚರಿಸುತ್ತಾರೆ. ಆದೇ ರೀತಿ ಇದೀಗ ರೋಹಿತ್ ಶರ್ಮಾ ಕೂಡಾ ಪಿಚ್ ನ ಮಣ್ಣನ್ನು ತಿನ್ನುವ ಮೂಲಕ ಧನ್ಯತೆ ಅರ್ಪಿಸಿದ್ದಾರೆ.

ಬಳಿಕ ನಾಯಕ ಮತ್ತು ಆಟಗಾರನಾಗಿ ಟಿ–20 ಮಾದರಿಗೆ ರೋಹಿತ್ ಶರ್ಮಾ ವಿದಾಯ ಹೇಳಿದ್ದಾರೆ. ಪಂದ್ಯದ ಬಳಿಕ ಮಾತನಾಡಿದ ರೋಹಿತ್, ಇದು ನನ್ನ ಕೊನೆಯ ಅಂತಾರಾಷ್ಟ್ರೀಯ ಟಿ–20 ಪಂದ್ಯ.

ಈ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳಲು ಇದಕ್ಕಿಂತ ಸಕಾಲ ಇನ್ನೊಂದಿಲ್ಲ. ನಾನು ಮೊದಲು ಭಾರತ ತಂಡ–ಕ್ಕೆ ಪದಾರ್ಪಣೆ ಮಾಡಿದ್ದೇ ಟಿ20 ಆಡುವ ಮೂಲಕ. ನಾಯಕನಾಗಿ ನಾನು ಕಪ್ ಗೆಲ್ಲಬೇಕೆಂದು ಬಯಸಿದ್ದೆ. ಇದು ಸಾಕಾರಗೊಂಡಿದೆ" ಎಂದು ಹೇಳುವ ಮೂಲಕ ವಿದಾಯ ಹೇಳಿದರು. ಟಿ–20ಯಲ್ಲಿ 159 ಪಂದ್ಯಗಳನ್ನು ಆಡಿರುವ ರೋಹಿತ್, 4231 ರನ್ ಗಳಿಸಿದ್ದು, 5 ಶತಕ ಹಾಗೂ 37 ಅರ್ಧಶತಕಗಳನ್ನು ಬಾರಿಸಿದ್ದಾರೆ.

Editor:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER's & PUBLISHER's,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.